# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 48 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 27-08-2026 ಪುಟ : 04 ಬೆಲೆ : 2-00


## ಅಸಮಾನತೆ ಇರುವವರೆಗೂ ಮೀಸಲಾತಿ ಅಗತ್ಯ ಮಾಜಿ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ನಾನೀಗ ಸರ್ಕಾರದ ಮುಖ್ಯಸ್ಥನಲ್ಲ, ನನ್ನ ಬಳಿ ಅಧಿಕಾರವಿಲ್ಲ. ಆದರೆ ಒಳ ಮೀಸಲಾತಿಯ ಪರವಿರುವವನು, ಮೀಸಲಾತಿ ವ್ಯವಸ್ಥೆಯ ಪರ, ಸಾಮಾಜಿಕ ನ್ಯಾಯದ ಪರ ಇರುವವನು. ಈ ವಿಚಾರದಲ್ಲಿ ಹಿಂದೆಯೂ ರಾಜಿಯಾಗಿಲ್ಲ, ಮುಂದೆಯೂ ರಾಜಿಯಾಗಲ್ಲ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಸಾಮಾಜಿಕ ನ್ಯಾಯಕ್ಕಾಗಿ ಒಳ ಮೀಸಲಾತಿ ಹೋರಾಟ ಸಮಿತಿ ಆಯೋಜಿಸಿದ್ದ ಒಳ ಮೀಸಲಾತಿ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾತಿ ವ್ಯವಸ್ಥೆ ಪರಿಣಾಮವಾಗಿ ಶೋಷಣೆಗೆ ಒಳಗಾದವರಿಗೆ, ಅವಕಾಶ ವಂಚಿತರಿಗೆ ಮೀಸಲಾತಿ ಸಿಗಲೇಬೇಕು. ನಾವು ಮೂರ್ಖರಲ್ಲ, ಅವಕಾಶದಿಂದ ವಂಚಿತರಾದವರು. ನಮ್ಮ ಬುದ್ಧಿಶಕ್ತಿ ತೋರಿಸಲು ಇದುವರೆಗೆ ಅವಕಾಶ ದೊರಕಿರಲಿಲ್ಲ. ಈಗ ಆ ಅವಕಾಶವನ್ನು ಮೀಸಲಾತಿ ವ್ಯವಸ್ಥೆಯೇ ಒದಗಿಸುತ್ತಿದೆ ಎಂದರು. ಎಲ್ಲಿಯವರೆಗೆ ಸಮಾನ ಅವಕಾಶಗಳು ಸಿಗುವುದಿಲ್ಲ, ಅಲ್ಲಿಯವರೆಗೆ ಅಸಮಾನತೆ ಹೋಗುವುದಿಲ್ಲ. ಈ ಅಸಮಾನತೆ ಹೋಗಬೇಕಾದರೆ ಎಲ್ಲರಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ಶಕ್ತಿ ಬರಬೇಕು ಎಂದು ಬಾಬಾ

2ನೇ ಪುಟಕ್ಕೆ...



# ಕೇಂದ್ರ ಸಂಪುಟ ಪುನರ್‌ರಚನೆಗೆ ಸಿದ್ಧತೆ; ಯುವ ಮುಖಗಳಿಗೆ ಆದ್ಯತೆ



ನವದೆಹಲಿ : ಬಿಜೆಪಿ ರಾಷ್ಟ್ರೀಯ ಸಂಘಟನೆಯಲ್ಲಿ ಪ್ರಮುಖ ಬದಲಾವಣೆಗಳಾದ ಬೆನ್ನಲ್ಲೇ, ಕೇಂದ್ರದ ಮೋದಿ 3.0 ಸರ್ಕಾರದ ಸಚಿವ ಸಂಪುಟ ಪುನರ್‌ರಚನೆಗೆ ದೆಹಲಿಯಲ್ಲಿ ಸಿದ್ಧತೆಗಳು ಆರಂಭವಾಗಿವೆ. ಮುಂಬರುವ ದಿನಗಳಲ್ಲಿ ಸಂಪುಟದಲ್ಲಿ ದೊಡ್ಡ ಮಟ್ಟದ ಬದಲಾವಣೆಗಳಾಗುವ ಸಾಧ್ಯತೆ ಇದೆ ಎಂದು ರಾಜಕೀಯ ವಲಯದಲ್ಲಿ ಚರ್ಚೆಗಳು ನಡೆಯುತ್ತಿವೆ.

ಪಕ್ಷದ ಹೊಸ ರಾಷ್ಟ್ರೀಯ ತಂಡದ ರಚನೆಯು ಸಂಪುಟ ಪುನರ್‌ರಚನೆಗೆ ಮುನ್ನಡೆಯ ಹೆಜ್ಜೆಯಾಗಿದೆ ಎನ್ನಲಾಗುತ್ತಿದೆ. ಸಂವಿಧಾನದ 75(1)ನೇ ವಿಧಿಯ ಪ್ರಕಾರ ಪ್ರಧಾನಮಂತ್ರಿ ಸೇರಿದಂತೆ ಕೇಂದ್ರ ಸಚಿವ ಸಂಪುಟದ ಗರಿಷ್ಠ ಸದಸ್ಯರ ಸಂಖ್ಯೆ ಲೋಕಸಭೆಯ

2ನೇ ಪುಟಕ್ಕೆ...

## ಭಾರತ ಧರ್ಮಛತ್ರವಲ್ಲ: ಕೇಂದ್ರ ಗೃಹ ಸಚಿವ ಅಮಿತ್ ಶಾ ಗುಡುಗು!



ದೆಹಲಿ: ಅಕ್ರಮ ನುಸುಳುಕೋರರಿಗೆ ದೇಶವನ್ನು ಮುಕ್ತವಾಗಿಸಲು ಭಾರತವೇನು ಧರ್ಮಶಾಲೆ (ಧರ್ಮಛತ್ರ) ಅಲ್ಲ. ಒಳನುಸುಳುಕೋರರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುಡುಗಿದ್ದಾರೆ.

ಗುಪ್ತಚರ ಬ್ಯೂರೋದ ರಾಷ್ಟ್ರೀಯ ಭದ್ರತಾ ಕಾರ್ಯತಂತ್ರ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, 2047 ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಲು ದೇಶದ ಆಂತರಿಕ ಭದ್ರತೆ ಬಲವಾಗಿರಬೇಕು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಭವಿಷ್ಯದಲ್ಲಿ ಒಳನುಸುಳುವಿಕೆ, ಭಯೋತ್ಪಾದನೆ ಮತ್ತು ಮಾದಕವಸ್ತು ಕಳ್ಳಸಾಗಣೆ ಸೇರಿದಂತೆ ಹೊಸ ಭದ್ರತಾ ಸವಾಲುಗಳನ್ನು ಮುಂಚಿತವಾಗಿ ಗುರುತಿಸಬೇಕು ಮತ್ತು ಕಾರ್ಯತಂತ್ರಗಳನ್ನು ಸಿದ್ಧಪಡಿಸಬೇಕು ಎಂದು ಅವರು ಸಲಹೆ ನೀಡಿದರು. ಅಕ್ರಮ ಒಳನುಸುಳುವಿಕೆಯು ರಾಷ್ಟ್ರೀಯ ಭದ್ರತೆ, ಆರ್ಥಿಕತೆ ಮತ್ತು ದೇಶದ ಜನಸಂಖ್ಯಾ ಸಮತೋಲನಕ್ಕೆ ಗಂಭೀರ ಬೆದರಿಕೆಗಳನ್ನೊಡ್ಡಿದೆ. ಈ ದೇಶದ ಹಕ್ಕುಗಳು ಇಲ್ಲಿನ ನಾಗರಿಕರಿಗೆ ಮಾತ್ರವೇ ಮೀಸಲಾಗಿವೆ ಎಂದ ಅವರು, ಅಕ್ರಮ ಒಳನುಸುಳುವಿಕೆ ವಿರುದ್ಧ ಸರ್ಕಾರ ಕಠಿಣ ನಿಲುವು ತಳೆದಿರುವುದಾಗಿದೆ ಎಂದು ಹೇಳಿದ್ದಾರೆ.

2ನೇ ಪುಟಕ್ಕೆ...

## ಮೇಕೆದಾಟು ತಮಿಳುನಾಡಿಗೂ ಒಳಿತು: ಡಿಕೆಶಿ

ಬೆಂಗಳೂರು, ಆ.26– ಪ್ರಸ್ತಾವಿತ ಮೇಕೆದಾಟು ಅಣೆಕಟ್ಟು ಯೋಜನೆಯು ತಮಿಳುನಾಡಿನ ಹಿತಾಸಕ್ತಿ ಹಾಗೂ ಬೆಂಗಳೂರಿನ ಕುಡಿಯುವ ನೀರಿನ ಅಗತ್ಯಗಳನ್ನು ಸಮಾನವಾಗಿ ರಕ್ಷಿಸಲಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಇಂಡಿಯಾ ಟುಡೇ ರೌಂಡ್‌ಟೇಬಲ್ ಕರ್ನಾಟಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರೊಂದಿಗೆ ಈ ಕುರಿತು ಚರ್ಚಿಸಿರುವುದಾಗಿ ತಿಳಿಸಿದರು. ಜೂನ್ 3ರಂದು ಮುಖ್ಯಮಂತ್ರಿಯಾಗಿ

2ನೇ ಪುಟಕ್ಕೆ...





ಬೆಂಗಳೂರಿನ ಆರ್ ಟಿ ನಗರದಲ್ಲಿರುವ ತರಳಬಾಳು ಕೇಂದ್ರಕ್ಕೆ ಸಿಎಂ ಡಿ ಕೆ ಶಿವಕುಮಾರ್ ಅವರು ಬುಧವಾರ ಭೇಟಿ ನೀಡಿ ತರಳಬಾಳುವಿನ ಸಿರಿಗೆರೆ ಮಠದ ಶ್ರೀ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳ ಆಶೀರ್ವಾದ ಪಡೆದರು. ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್, ಶಾಸಕರಾದ ಸಮರ್ಥ್ ಶಾಮನೂರು ಅವರು ಇದ್ದರು.

## "ಅಚ್ಛೇ ದಿನ್" ದುಬಾರಿ ದಿನ್: ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ವಾಗ್ದಾಳಿ..!

ನವದೆಹಲಿ: ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ಮುಂದಿಟ್ಟುಕೊಂಡು ಕೇಂದ್ರದ ಆಡಳಿತಾರೂಢ ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ಬುಧವಾರ ವಾಗ್ದಾಳಿ ನಡೆಸಿದೆ. ಬಿಜೆಪಿ ಭರವಸೆ ನೀಡಿದ್ದ 'ಅಚ್ಛೇ ದಿನ' ಬದಲಾಗಿ, ನಿರಂತರ ಬೆಲೆ ಏರಿಕೆಯು ಜನಸಾಮಾನ್ಯರ ಕುಟುಂಬದ ಬಜೆಟ್ ಮೇಲೆ ಒತ್ತಡ ಹೇರುತ್ತಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸರ್ಕಾರ ಗಮನ ಬೇರೆಡೆ ಸೆಳೆಯುವ ತಂತ್ರಗಳು ಮತ್ತು ಅರ್ಥಹೀನ ಮಾತುಗಳ ಮೂಲಕ ಹೊಣೆಗಾರಿಕೆಯಿಂದ ನುಣುಚಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಟೀಕಿಸಿದ್ದಾರೆ. ಆದರೆ, ಬೆಲೆ ಏರಿಕೆ ಕುರಿತು ಕಾಂಗ್ರೆಸ್ ಹಾಗೂ ಜನರು ಪ್ರಶ್ನೆಗಳನ್ನು ಮುಂದುವರಿಸಲಿದ್ದಾರೆ ಎಂದು ಹೇಳಿದ್ದಾರೆ.



ಇದೇ ವೇಳೆ ದೈನಂದಿನ ಬಳಕೆಯ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ಪ್ರಸ್ತಾಪಿಸಿದ ಖರ್ಗೆ, ಕಳೆದ ಒಂದು ವರ್ಷದಲ್ಲಿ ಈರುಳ್ಳಿ ಬೆಲೆ ಶೇ.59ರಷ್ಟು

2ನೇ ಪುಟಕ್ಕೆ...

## ಈದ್ ಮಿಲಾದ್: ಸಹೋದರತ್ವದ ಸಂದೇಶ ಸಮಾಜಕ್ಕೆ ಪ್ರೇರಣೆಯಾಗಲಿ: ಬಸವಂತಪ್ಪ

ವಿಜಯನಗರ : ಶಾಂತಿ, ಸೌಹಾರ್ದ ಹಾಗೂ ಸಹೋದರತ್ವದ ಪ್ರತೀಕವಾದ ಈದ್ ಮಿಲಾದ್ ಹಬ್ಬವನ್ನು ನಗರ ಸೇರಿದಂತೆ ಜಿಲ್ಲೆಯಾದ್ಯಂತ ಬುಧವಾರ ಮುಸ್ಲಿಂ ಬಾಂಧವರು ಸಡಗರ, ಸಂಭ್ರಮದಿಂದ ಆಚರಿಸಿದರು.

ಈ ಹಿನ್ನೆಲೆಯಲ್ಲಿ ಬೆಂಗಳೂರಿನಿಂದ ದಾವಣಗೆರೆಗೆ ಆಗಮಿಸುತ್ತಿದ್ದ ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಮತ್ತು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್. ಬಸವಂತಪ್ಪ ಅವರು ಮಾರ್ಗಮಧ್ಯೆ ಮಾಯಕೊಂಡ ವಿಧಾನಸಭಾ ಕ್ಷೇತ್ರದ ಆನಗೋಡು ಗ್ರಾಮದಲ್ಲಿ ಮುಸ್ಲಿಂ ಬಾಂಧವರನ್ನು ಭೇಟಿಯಾಗಿ ಈದ್ ಮಿಲಾದ್ ಹಬ್ಬದ ಶುಭಾಶಯಗಳನ್ನು ಕೋರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಪ್ರವಾದಿ ಮಹಮ್ಮದರ ಜನ್ಮದಿನದ ಸ್ಮರಣಾರ್ಥ ಆಚರಿಸಲಾಗುವ ಈದ್ ಮಿಲಾದ್ ಹಬ್ಬವು ಶಾಂತಿ, ಸಹೋದರತ್ವ, ಸಹಾನುಭೂತಿ

2ನೇ ಪುಟಕ್ಕೆ...



## ನೇಪಾಳ ಪ್ರವಾಹ: 8 ಸಾವು, 125 ಮಂದಿ ಭಾರತೀರು ಸೇರಿದ 400 ಮಂದಿ ನಾಪತ್ತೆ



ನೇಪಾಳ : ಇಂದು ಬೆಳಗ್ಗೆ ಉತ್ತರ ನೇಪಾಳದ ರಸುವಾ ಜಿಲ್ಲೆಗೆ ಅಪ್ಪಳಿಸಿದ ಭೀಕರ ಪ್ರವಾಹವು ವ್ಯಾಪಕ ವಿನಾಶ ಉಂಟು ಮಾಡಿದೆ. ನದಿಗಳ ಮೇಲೆ ನಿರ್ಮಿಸಲಾದ ಸೇತುವೆಗಳು ಮತ್ತು ಮನೆಗಳನ್ನು ಪ್ರವಾಹಕ್ಕೆ ಕೊಚ್ಚಿ ಹೋಗಿದೆ. ಇಲ್ಲಿಯವರೆಗೆ ಎಂಟು ಜನರು ಸಾವನ್ನಪ್ಪಿದ್ದಾರೆ. ಇಂದು ಬೆಳಗ್ಗೆ ಉತ್ತರ ನೇಪಾಳದ ರಸುವಾ ಜಿಲ್ಲೆಗೆ

2ನೇ ಪುಟಕ್ಕೆ...

## ಶ್ರದ್ಧಾಭಕ್ತಿಯಿಂದ ಜರುಗಿದ ಈದ್ ಮಿಲಾದ್



ದಾವಣಗೆರೆ: ಪ್ರವಾದಿ ಮಹಮ್ಮದ್ ಪೈಗಂಬರ್ ಅವರ ಜನ್ಮ ದಿನದ ಪ್ರಯುಕ್ತ ಮುಸ್ಲಿಂ ಸಮುದಾಯದವರು ಈದ್ ಮಿಲಾದ್ ಹಬ್ಬವನ್ನು ಬಹಳ ಶ್ರದ್ಧಾಭಕ್ತಿಯಿಂದ ಆಚರಿಸಿದರು. ಬುಧವಾರ ಈದ್ ಮಿಲಾದ್ ಹಬ್ಬದ ಹಿನ್ನೆಲೆ ಆಜಾದ್ ನಗರದಿಂದ ಹಮ್ಮಿಕೊಂಡಿದ್ದ ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯಲ್ಲಿ ಮುಸ್ಲಿಂ ಸಮುದಾಯದವರು ಭಾಗವಹಿಸಿದ್ದರು. ಮೆಕ್ಕಾ-ಮದೀನಾ ಮಾದರಿ ನಾತ್‌ಗಳು, ಸಲಾಂಗಳನ್ನು ಹಾಡುತ್ತ ಮುನ್ನಡೆದರು. ಇಸ್ಲಾಂ ಧರ್ಮದ ಹಸಿರು ಧ್ವಜಗಳ ಮಧ್ಯೆ ರಾಷ್ಟ್ರೀಯ ಧ್ವಜಗಳನ್ನು ಮುಸ್ಲಿಂರು ಪ್ರದರ್ಶಿಸಿದರು.

2ನೇ ಪುಟಕ್ಕೆ..

## ಸಿದ್ದರಾಮಯ್ಯ ನನ್ನನ್ನು ಸಿಎಂ ಹುದ್ದೆಗೆ ಶಿಫಾರಸು ಮಾಡಿದ್ದರು, ಆದರೆ ಹೈಕಮಾಂಡ್ ಸ್ಕೀಮ್ ಬೇರೆಯೇ ಇತ್ತು: ಪರಮೇಶ್ವರ್

ಬೆಂಗಳೂರು: ಸಿದ್ದರಾಮಯ್ಯ ನನ್ನ ಹೆಸರನ್ನು ಮುಖ್ಯಮಂತ್ರಿ ಹುದ್ದೆಗೆ ಶಿಫಾರಸು ಮಾಡಿದ್ದರು, ಆದರೆ ಹೈಕಮಾಂಡ್ ಸ್ಕೀಮ್ ಬೇರೆಯೇ ಇತ್ತು ಎಂದು ಉಪಮುಖ್ಯಮಂತ್ರಿ ಜಿ. ಪರಮೇಶ್ವರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪರಮೇಶ್ವರ್ ಅವರನ್ನು ಉಪಮುಖ್ಯಮಂತ್ರಿ ಮಾಡಿದ್ದು ಎಂಬ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದರು, ಸಿದ್ದರಾಮಯ್ಯ ಮತ್ತು ನಾನು ಹಲವು ವರ್ಷಗಳಿಂದ ಒಟ್ಟಿಗೆ ಕೆಲಸ ಮಾಡುತ್ತಿದ್ದೇವೆ.

ನಾನು 8 ವರ್ಷಗಳ ಕಾಲ ಪಿಸಿಸಿ ಅಧ್ಯಕ್ಷನಾಗಿದ್ದೆ. ನಾವು ಒಟ್ಟಿಗೆ ಕೆಲಸ ಮಾಡಿದ್ದೇವೆ. ನಂತರ ನಾನು 2015 ರಲ್ಲಿ ಗೃಹ ಸಚಿವರಾಗಿ ಅವರ ಸಂಪುಟಕ್ಕೆ ಸೇರಿದೆ. 2023 ರಲ್ಲಿ ನಾನು ಅವರ ಮಂತ್ರಿ ಮಂಡಲ ಸೇರಿದೆ. ನಾವು ಒಟ್ಟಿಗೆ ಕೆಲಸ ಮಾಡಿದ್ದೇವೆ, ಅವರಿಗೆ ನನ್ನ ಬಗ್ಗೆ ಚೆನ್ನಾಗಿ ತಿಳಿದಿದೆ ಎಂದಿದ್ದಾರೆ. ನಿನ್ನೆ ಅವರು ನನ್ನನ್ನು ಸಿಎಂ ಹುದ್ದೆಗೆ ಶಿಫಾರಸು ಮಾಡಿದ್ದಾರೆಂದು ಹೇಳಿದ್ದರಲ್ಲಿ ನನಗೆ ಆಶ್ಚರ್ಯವಿಲ್ಲ. ನಾಲ್ಕೈದು ಉಪಮುಖ್ಯ ಮಂತ್ರಿಗಳನ್ನು ಮಾಡುವ ಯೋಜನೆಯಿತ್ತು, ಆದರೆ ಸಿದ್ದರಾಮಯ್ಯ ಅವರು ಕೇವಲ ಒಬ್ಬರಿಗೆ ಡಿಸಿಎಂ ಹುದ್ದೆ ನೀಡಬೇಕೆಂದು ಹೇಳಿ ನನ್ನ ಹೆಸರನ್ನು

2ನೇ ಪುಟಕ್ಕೆ...



# 'ಅಚ್ಛೇ ದಿನ್' ದುಬಾರಿ ದಿನ್:

## ಮೋದಿ ಸರ್ಕಾರದ ವಿರುದ್ಧ ಕಾಂಗ್ರೆಸ್ ವಾಗ್ದಾಳಿ..!

ಏರಿಕೆಯಾಗಿದ್ದು, ಹಲವು ನಗರಗಳಲ್ಲಿ ಕೆ.ಜಿ.ಗೆ ರೂ.5060ಕ್ಕೆ ಮಾರಾಟವಾಗುತ್ತಿದೆ ಎಂದು ತಿಳಿಸಿದ್ದಾರೆ.

ಸಕ್ಕರೆ ಬೆಲೆ ಕೆ.ಜಿ.ಗೆ ರೂ.60 70ರಷ್ಟಿದ್ದು, ಕೆಲವೆಡೆ ರೂ.72ರವರೆಗೂ ತಲುಪಿದೆ. ಸಾಸಿವೆ ಎಣ್ಣೆಯ ಬೆಲೆಯೂ ಲೀಟರ್‌ಗೆ ರೂ.200ಕ್ಕಿಂತ ಹೆಚ್ಚಾಗಿದೆ ಎಂದು ಹೇಳಿದ್ದಾರೆ.

ಅಲ್ಲದೆ, ಆಹಾರ ಹಣದುಬ್ಬರ ಶೇ.5.52 ಮತ್ತು ಸಗಟು ಹಣದುಬ್ಬರ ಶೇ.9.78ರಷ್ಟಿದೆ ಎಂದು ಹೇಳಿದರುವ ಅವರು, ಹಬ್ಬದ ಋತುವಿನ ಸಂದರ್ಭದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯು ಸಾಮಾನ್ಯ ಕುಟುಂಬಗಳ ಮೇಲೆ ಬೀರುತ್ತಿರುವ ಪರಿಣಾಮದ ಬಗ್ಗೆಯೂ ಅವರು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದ್ದಾರೆ.

ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದು 12 ವರ್ಷಗಳಾಗಿವೆ. ಆದರೆ, 'ಅಚ್ಛೇ ದಿನ'ದ ವಾಸ್ತವ ಏನೆಂದರೆ, ಕೆಲವೊಮ್ಮೆ ಬೇಳೆ, ಕೆಲವೊಮ್ಮೆ ತರಕಾರಿ, ಕೆಲವೊಮ್ಮೆ ಎಣ್ಣೆ, ಮತ್ತೆ ಕೆಲವೊಮ್ಮೆ ಸಕ್ಕರೆ ಹೀಗೆ ಅಗತ್ಯ ವಸ್ತುಗಳ ಬೆಲೆ ಏರಿಕೆ ಜನಸಾಮಾನ್ಯರ ಬಜೆಟ್ ಅನ್ನು ಹಾಳು ಮಾಡುತ್ತಿದೆ ಎಂದು ಹೇಳಿದ್ದಾರೆ.

ಸೋಮವಾರವೂ ಕಾಂಗ್ರೆಸ್ ಅಗತ್ಯ ವಸ್ತುಗಳ ಬೆಲೆಗಳಲ್ಲಿ 'ಗಗನಕ್ಕೇರುತ್ತಿರುವ' ಹಣದುಬ್ಬರದ ಬಗ್ಗೆ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿತ್ತು.

'ಅಚ್ಛೇ ದಿನ' ತಂದಿದ್ದೇವೆ ಎಂಬ ಸರ್ಕಾರದ ಹೇಳಿಕೆಯ ನಡುವೆಯೂ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ತಮ್ಮ ದೈನಂದಿನ ಖರ್ಚುಗಳನ್ನು ಹೇಗೆ ನಿಭಾಯಿಸಬೇಕು ಎಂದು ಪ್ರಶ್ನಿಸಿತ್ತು.

ಅಗತ್ಯ ವಸ್ತುಗಳ ಬೆಲೆ ನಿಯಂತ್ರಿಸುವಲ್ಲಿ ಮೋದಿ ಸರ್ಕಾರ ವಿಫಲವಾಗಿದೆ ಎಂದು ಕಾಂಗ್ರೆಸ್ ಪದೇಪದೆ ಆರೋಪಿಸುತ್ತಿದ್ದು, ಬೆಲೆ ಏರಿಕೆಯ ಹೊರೆ ಮತದಾರರ ನೆನಪಿನಲ್ಲಿ ಉಳಿಯಲಿದೆ ಎಂದು ಎಚ್ಚರಿಸಿದೆ.

## ಟಾಟಾ ಏಸ್‌ಗೆ ಪಲ್ಸರ್ ಬೈಕ್ ಡಿಕ್ಕಿ; ಮೂವರು ದುರ್ಮರಣ

ಕೊಪ್ಪಳ/ಬೆಂಗಳೂರು: ಕೊಪ್ಪಳ ಜಿಲ್ಲೆ ಕುಕನೂರು ತಾಲೂಕಿನ ಬನ್ನಿಕೊಪ್ಪ ಗ್ರಾಮದ ಬಳಿ ನಿಂತಿದ್ದ ಟಾಟಾ ಏಸ್ ವಾಹನಕ್ಕೆ ಪಲ್ಸರ್ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಮೂವರು ದಾರುಣವಾಗಿ ಮೃತಪಟ್ಟಿರುವ ಘಟನೆ ರಾಷ್ಟ್ರೀಯ ಹೆದ್ದಾರಿ 67ರಲ್ಲಿ ನಡೆದಿದೆ. ಅಪಘಾತದಲ್ಲಿ ಬೈಕ್‌ನಲ್ಲಿದ್ದ ನರಗುಂದ ಮೂಲದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಕುಕನೂರು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ರಾಜ್ಯದಲ್ಲಿ ಬರಗಾಲದ ಬಿಸಿ: ಗಗನಕ್ಕೇರಿದ ಸಕ್ಕರೆ, ಈರುಳ್ಳಿ ಬೆಲೆ..!

ಬೆಂಗಳೂರು: ರಾಜ್ಯದಲ್ಲಿ ಎದುರಾಗಿರುವ ತೀವ್ರ ಬರಗಾಲ ಮತ್ತು ಮುಂಗಾರು ಮಳೆಯ ಅಭಾವವು ಇದೀಗ ಜನಸಾಮಾನ್ಯರ ಮೇಲೆ ಪರಿಣಾಮ ಬೀರತೊಡಗಿದೆ. ಮಾರುಕಟ್ಟೆಯಲ್ಲಿ ಸಕ್ಕರೆ ಮತ್ತು ಈರುಳ್ಳಿ ಬೆಲೆಗಳು ದಿಢೀರ್ ಗಗನಕ್ಕೇರಿದ್ದು, ಗ್ರಾಹಕರು ಕಂಗಾಲಾಗಿದ್ದಾರೆ.



## ಶ್ರದ್ಧಾಭಕ್ತಿಯಿಂದ ಜರುಗಿದ ಈದ್ ಮಿಲಾದ್

ಈದ್ ಮಿಲಾದ್ ಮೆರವಣಿಗೆ ಆಜಾದ್ ನಗರದಿಂದ ಹೊರಟು ಅಹ್ಮದ್ ನಗರ, ಮದೀನಾ ಆಟೋ ನಿಲ್ದಾಣ ವೃತ್ತ, ಎನ್ ಆರ್ ರಸ್ತೆ, ಕೆಆರ್ ಮಾರುಕಟ್ಟೆ ತಲುಪಿತು. ಇಸ್ಲಾಂ ಪೇಟೆ, ಗಡಿಯಾರ ಕಂಭ ವೃತ್ತ, ವಸಂತ ರಸ್ತೆ, ಅರುಣ್ ಟಾಕೀಸ್ ಬಳಿ ಬಂದು ಪಿಬಿ ರಸ್ತೆ ಸೇರಿತು. ಬಳಿಕ ಗಾಂಧಿ ವೃತ್ತ, ಅಶೋಕ ರಸ್ತೆ, ಮಾಗನಹಳ್ಳಿ ರಸ್ತೆ ಮೂಲಕ ಮಿಲಾದ್ ಮೈದಾನಕ್ಕೆ ಮೆರವಣಿಗೆ ಬಂದು ಕೊನೆಗೊಂಡಿತು. ಮಧ್ಯಾಹ್ನ 2.30ರ ಸುಮಾರಿಗೆ ಪುಟ್ಟ ಮಕ್ಕಳಿಂದ ಹಿಡಿದು ಹಿರಿಯರು ತಮ್ಮಮ್ಮ ಏರಿಯಾದಲ್ಲಿ ಒಂದೆಡೆ ಸೇರಿದರು. ಕೆಟಿಜೆ ನಗರ, ಭಗತ್ ಸಿಂಗ್ ನಗರ, ಲೇಬರ್ ಕಾಲೋನಿ ಮತ್ತಿತರರೇ ಭಾಗದ ಜನರು ಅಂಬೇಡ್ಕರ್ ಸರ್ಕಾಲ್ ಬಂದಿ ಸೇರಿ ಅಲ್ಲಿಂದ ಮೆರವಣಿಗೆ ಹೊರಟರು. ನಂತರ ಗಾಂಧಿ ಸರ್ಕಲ್‌ನಲ್ಲಿ ಸೇರಿದರು. ಹಾಗೆಯೇ ವಿನೋಬನಗರದಿಂದ ಹೊರಟ ಮೆರವಣಿಗೆಯು ಅರುಣ ಸರ್ಕಲ್‌ನಲ್ಲಿ ಸೇರಿತು. ನಗರದ ವಿವಿಧ ಭಾಗಗಳಿಂದ ಹೊರಟ ಮೆರವಣಿಗೆಗಳು ಸಂಜೆ ವೇಳೆಗೆ ಮಿಲಾದ್ ಮೈದಾನವನ್ನು ತಲುಪಿದವು. ಮಿಲಾದ್ ಮೈದಾನದಲ್ಲಿ ಧಾರ್ಮಿಕ ಸಭೆ ಮೆರವಣಿಗೆಯ ಹಿನ್ನೆಲೆಯಲ್ಲಿ ಪೊಲೀಸರು ಬಿಗಿ ಭದ್ರತೆ ಕೈಗೊಂಡಿದ್ದರು. ನಗರದ ಪ್ರಮುಖ ರಸ್ತೆಗಳಲ್ಲಿ ವಾಹನ ಸಂಚಾರಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗಿತ್ತು. ಮೆರವಣಿಗೆಯ ಚಲನವಲನದ ಮೇಲೆ ಸಿಸಿಟಿವಿ ಹಾಗೂ ಡ್ರೋನ್ ಕ್ಯಾಮೆರಾಗಳ ಮೂಲಕ ನಿಗಾ ಇರಿಸಲಾಗಿತ್ತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಹೆಚ್.ಟಿ. ಶೇಖರ್ ಅವರು ಮೆರವಣಿಗೆಯಲ್ಲಿ ಪಾಲ್ಗೊಂಡು ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಿದರು. ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಮೆರವಣಿಗೆ ಶಾಂತಿಯುತವಾಗಿ ಸಾಗುವಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದರು.

# ಸಿದ್ದರಾಮಯ್ಯ ನನ್ನನ್ನು ಮುಖ್ಯಮಂತ್ರಿ ಹುದ್ದೆಗೆ ಶಿಫಾರಸು ಮಾಡಿದ್ದರು, ಆದರೆ ಹೈಕಮಾಂಡ್ ಸ್ಕೀಮ್ ಬೇರೆಯೇ ಇತ್ತು: ಪರಮೇಶ್ವರ್

ಹೈಕಮಾಂಡ್ ಬಳಿ ಶಿಫಾರಸು ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

ಕೇಂದ್ರಕ್ಕೆ ಬರ ಅಧ್ಯಯನಕ್ಕೆ ಮನವಿ ಸಲ್ಲಿಸುವ ವಿಚಾರದ ಬಗ್ಗೆ ಮಾತನಾಡಿದ ಡಿಸಿಎಂ ಪರಮೇಶ್ವರ್, ಕೇಂದ್ರ ಸರ್ಕಾರದ 2020ರ ಮಾರ್ಗಸೂಚಿ ಪ್ರಕಾರವೇ ಬರ ಪೀಡಿತ ಪ್ರದೇಶ ಘೋಷಿಸಬೇಕಾಗುತ್ತದೆ. ಸದ್ಯ 102 ತಾಲೂಕುಗಳಲ್ಲಿ ನಿಯಮದಡಿ ವರದಿ ಬಂದಿದ್ದು, ವಸ್ತುಸ್ಥಿತಿ ಅಧ್ಯಯನ ನಡೆಸಲಾಗಿದೆ. ಈ ತಿಂಗಳ ಅಂತ್ಯದಲ್ಲಿ ಸಚಿವ ಸಂಪುಟದಲ್ಲಿ ಚರ್ಚಿಸಿ, ಕೇಂದ್ರಕ್ಕೆ ಅಧಿಕೃತ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ನೂರು ಕೇಸ್ ಸಿಐಡಿಗೆ ಹಸ್ತಾಂತರ ವಿಚಾರದ ಬಗ್ಗೆ ಮಾತನಾಡಿದ ಅವರು, ರೆಗ್ಯೂಲರ್ ಆಗಿ ಇಂಥಾ ಘಟನೆ ಆದಾಗ, ಸರ್ಕಾರಕ್ಕೆ ಅನುಮಾನ, ಡೌಟ್ ಬಂದಾಗ ಅದನ್ನ ಸಿಐಡಿಗೆ ಕೊಡ್ತಾರೆ. ಅದೇ ರೀತಿ ಮಾಡಿದ್ದಾರೆ, ಇದರಲ್ಲಿ ಹೊಸದೇನೂ ಇಲ್ಲ ಎಂದು ಸ್ಪಷ್ಟನೆ ಕೊಟ್ಟರು.

# ಧಾರ್ಮಿಕ-ಆಧ್ಯಾತ್ಮಿಕ ಕಾರ್ಯಗಳು ನಿರಂತರವಾಗಿರಲಿ

ಬಳ್ಳಾರಿ : ಶ್ರೀಮಠದಲ್ಲಿ ವಿಶ್ವಗುರು ಬಸವಣ್ಣ ಮತ್ತು ರೇಣುಕಾಚಾರ್ಯ ಜಯಂತಿ ಅದ್ದೂರಿಯಾಗಿ ಆಚರಿಸುವ ಮೂಲಕ ಗುರು-ವಿರಕ್ತರನ್ನು ಒಂದೇ ದೃಷ್ಟಿಕೋನದಲ್ಲಿ ನೋಡಿದ ಧೀಮಂತ ಮಠಾಧೀಶರಲ್ಲಿ ರಾಘವಾಂಕ ಪಂಡಿತಾರಾಧ್ಯ ಶಿವಾಚಾರ್ಯರು ಒಬ್ಬರು ಎಂದು ಶ್ರೀ ಕಲ್ಯಾಣ ಮಹಾಸ್ವಾಮಿ ಬಣ್ಣಿಸಿದರು.

ರಾಘವಾಂಕ ಸ್ವಾಮಿಗಳ ಹಾವಿಗೆ ಮಠದಲ್ಲಿ ಆಯೋಜಿಸಿದ್ದ ಅಮೃತ ಶಿಲಾಮೂರ್ತಿ ಪ್ರತಿಷ್ಠಾಪನೆ ಮತ್ತು ಪುರಾಣ ಸಮಾರೋಪದಲ್ಲಿ ಆಶೀರ್ವಚನ ನೀಡಿದರು.

ರಾಘವಾಂಕ ಪಂಡಿತಾರಾಧ್ಯ ಶ್ರೀಗಳ ಪರಿಶ್ರಮದ ಫಲವಾಗಿ ಶ್ರೀಮಠ ಸರ್ವತೋಮುಖ ಅಭಿವೃದ್ಧಿಯಾಗಿದೆ. ಭಕ್ತರೂ ಅವರ ಅಭಿವೃದ್ಧಿ ಕಾರ್ಯಗಳಿಗೆ ಕೈಜೋಡಿಸಿದ್ದಾರೆ. ಅವರ ಆಶಯದಂತೆ ಮಠದಲ್ಲಿ ಧಾರ್ಮಿಕ ಮತ್ತು ಆಧ್ಯಾತ್ಮಿಕ ಕಾರ್ಯಕ್ರಮಗಳು ನಿರಂತರವಾಗಿ ಜರುಗಲಿ ಎಂದು ಆಶಿಸಿದರು.

ಸೂಗೂರೇಶ್ವರ ಶ್ರೀಗಳು ಮಾತನಾಡಿ, ಗುರುವಿನ ಕರ್ತೃ ಗದ್ದುಗೆ ಮೇಲೆ ಶಿಲಾಮೂರ್ತಿ ಪ್ರತಿಷ್ಠಾಪನೆ ನೆರವೇರಿಸಿರುವ ಶಿಷ್ಯಬಳಗಕ್ಕೆ ಗುರುವಿನ ಪ್ರೇರಣೆಯಾಗಿದೆ. ಮುಂದಿನ ಪೀಳಿಗೆಗೆ ಶ್ರೀಗಳನ್ನು ಪರಿಚಯಿಸುವ ಕೆಲಸ ಮಾಡಿದ ಸೇವಾಸಮಿತಿ ಕಾರ್ಯ ಶ್ಲಾಘನೀಯ ಎಂದರು. ಶಿಲಾಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ 11 ದಿನಗಳ ಕಾಲ ಜರುಗಿದ ಹೇಮರಡ್ಡಿ ಮಲ್ಲಮ್ಮ ಪುರಾಣ ಸಂಪನ್ನಗೊಂಡಿತು. ವಿಶ್ವನಾಥ ಶಾಸಿ ಪುರಾಣ ಪ್ರವಚನ ನೀಡಿದರು. ರೇಣುಕಾರಾಜ ಗವಾಯಿ ಪುರಾಣ ಪಠಣ ಮತ್ತು ಸಂಗೀತ ಸೇವೆ ಸಲ್ಲಿಸಿದರು. ಜಿ.ಸುಧಾಕರ್ ತಬಲಾ ಸಾಥ್ ನೀಡಿದರು.

# ನೇಪಾಳ ಪ್ರವಾಹ: 8 ಸಾವು, 125 ಮಂದಿ ಮಂದಿ ನಾಪತ್ತೆ

ಅಪ್ಪಳಿಸಿದ ಭೀಕರ ಪ್ರವಾಹವು ವ್ಯಾಪಕ ವಿನಾಶ ಉಂಟು ಮಾಡಿದೆ. ನದಿಗಳ ಮೇಲೆ ನಿರ್ಮಿಸಲಾದ ಸೇತುವೆಗಳು ಮತ್ತು ಮನೆಗಳನ್ನು ಪ್ರವಾಹಕ್ಕೆ ಕೊಚ್ಚಿ ಹೋಗಿದೆ. ಇಲ್ಲಿಯವರೆಗೆ ಎಂಟು ಜನರು ಸಾವನ್ನಪ್ಪಿದ್ದು 105 ಭಾರತೀಯರು ಸೇರಿದಂತೆ 291 ವಿದೇಶಿ ಪ್ರವಾಸಿಗರು ನಾಪತ್ತೆಯಾಗಿದ್ದಾರೆ ಎಂದು ನೇಪಾಳ ಪ್ರವಾಸೋದ್ಯಮ ಮಂಡಳಿ ತಿಳಿಸಿದೆ. ಚೀನಾದ ಟಿಬೆಟ್ ಪ್ರದೇಶದ ಭೋಟೆಕೋಶಿ ನದಿಯಲ್ಲಿ ಹಠಾತ್ ಉಕ್ಕಿ ಹರಿದ ಪರಿಣಾಮ ಈ ಭೀಕರ ಪ್ರವಾಹ ಉಂಟಾಗಿದೆ. ಪ್ರಧಾನಿ ಬಲೇಂದ್ರ ಶಾ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ತುರ್ತು ಸಭೆ ಕರೆದಿದ್ದಾರೆ.

ಸ್ಥಳೀಯವಾಗಿ ಭಾರೀ ಮಳೆಯಾಗದಿದ್ದರೂ ಹಿಮನದಿ ಸರೋವರ ಸ್ಫೋಟ ಅಥವಾ ನೇಪಾಳದ ಮೇಲಿನ ಹಿಮಾಲಯ ಪ್ರದೇಶದಲ್ಲಿ ಕರಗುವ ಹಿಮದಿಂದ ಈ ಘಟನೆ ಸಂಭವಿಸಿದೆ ಎಂದು ಶಂಕಿಸಲಾಗಿದೆ. ವಿನಾಶಕಾರಿ ಪ್ರವಾಹದ ಹಲವಾರು ವೀಡಿಯೊಗಳು ಹೊರಬರುತ್ತಿವೆ. ಭೋಟೆ ಕೋಶಿ ನದಿಯಲ್ಲಿನ ಹಠಾತ್ ಪ್ರವಾಹವು ನೇಪಾಳದ ನುವಕೋಟ್ ಮತ್ತು ಧಾಡಿಂಗ್ ಜಿಲ್ಲೆಗಳಲ್ಲಿ ವಿನಾಶವನ್ನುಂಟುಮಾಡಿದೆ ಎಂದು ಅವು ತೋರಿಸುತ್ತವೆ. ನೇಪಾಳಿ ಮಾಧ್ಯಮ ವರದಿಗಳ ಪ್ರಕಾರ, ಗಡಿಯ ಟಿಬೆಟ್ ಕಡೆಯಿಂದ ಪ್ರವಾಹದ ನೀರು ಬಂದಿದ್ದು, ನೇಪಾಳದಲ್ಲಿ ಭಾರಿ ಹಾನಿಯನ್ನುಂಟುಮಾಡಿದೆ ಮತ್ತು ಹಲವಾರು ಹಳ್ಳಿಗಳು ಕೊಚ್ಚಿಹೋಗಿವೆ. ನುವಾಕೋಟ್ ಮತ್ತು ಧಾಡಿಂಗ್ ಜಿಲ್ಲೆಗಳಿಂದ ಇಲ್ಲಿಯವರೆಗೆ ಕನಿಷ್ಠ ಎಂಟು ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಕೇಂದ್ರ ಪೊಲೀಸ್ ವಕ್ತಾರ ಮತ್ತು ಪೊಲೀಸ್ ಉಪ ಮಹಾನಿರೀಕ್ಷಕ (ಡಿಐಜಿ) ಅಬಿನಾರಾಯಣ್ ಕಫ್ಲೆ ಹೇಳಿದ್ದಾರೆ. ನೇಪಾಳ ಪ್ರವಾಸೋದ್ಯಮ ಮಂಡಳಿಯ ಪ್ರಕಾರ, 291 ವಿದೇಶಿಯರು ಮತ್ತು 93 ನೇಪಾಳಿ ನಾಗರಿಕರು ಸೇರಿದಂತೆ ಪ್ರವಾಹ ಪೀಡಿತ ಪ್ರದೇಶದಿಂದ ಕನಿಷ್ಠ 384 ಪ್ರಯಾಣಿಕರು ಕಾಣೆಯಾಗಿದ್ದಾರೆ ಎಂದು ವರದಿಯಾಗಿದೆ. ವಿದೇಶಿಯರಲ್ಲಿ 105 ಭಾರತೀಯ ಪ್ರಜೆಗಳು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಸುವಾ ಜಿಲ್ಲೆಯಲ್ಲಿ ಕನಿಷ್ಠ 26 ನೇಪಾಳ ಪೊಲೀಸ್ ಸಿಬ್ಬಂದಿ ಇನ್ನೂ ಕಾಣೆ-ಯಾಗಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಸಶಸ್ತ್ರ ಪೊಲೀಸ್ ಪಡೆ ತನ್ನ ಏಳು ಸಿಬ್ಬಂದಿ ಕಾಣೆಯಾಗಿದ್ದಾರೆ ಎಂದು ಹೇಳಿದರು.

ನೇಪಾಳಿ ಸೇನೆಯು ಪೀಡಿತ ಪ್ರದೇಶಕ್ಕೆ ಹೆಲಿಕಾಪ್ಟರ್‌ಗಳು ಮತ್ತು ವಿಪತ್ತು ಪರಿಹಾರ ಸಿಬ್ಬಂದಿಯನ್ನು ನಿಯೋಜಿಸಿದೆ. ಹಾನಿಯ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಲು ಪ್ರಯತ್ನಗಳು ನಡೆಯುತ್ತಿವೆ ಎಂದು ಸೇನೆ ಹೇಳಿಕೆಯಲ್ಲಿ ತಿಳಿಸಿದೆ. ಏತನ್ಮಧ್ಯೆ, ನೇಪಾಳದ ಜಲವಿದ್ಯುತ್ ಯೋಜನೆಗಳು ಗಮನಾರ್ಹ ಹಾನಿಯನ್ನುಂಟುಮಾಡಿವೆ ಎಂಬ ಭಯವಿದೆ. ಪ್ರವಾಹವು ರಸ್ತೆಗಳು ಮತ್ತು ವಿದ್ಯುತ್ ಸರಬರಾಜನ್ನು ಅಡ್ಡಿಪಡಿಸಿದೆ. ನೇಪಾಳ ವಿದ್ಯುತ್ ಪ್ರಾಧಿಕಾರ ತನ್ನ ಪ್ರಮುಖ ಜಲವಿದ್ಯುತ್ ಮತ್ತು ಪ್ರಸರಣ ಸೌಲಭ್ಯಗಳಲ್ಲಿ ಕನಿಷ್ಠ ಆರು - ರಸುವಾಗಧಿ, ಚಿಲಿಮೆ, ತ್ರಿಶೂಲಿ 3ಂ, ತ್ರಿಶೂಲಿ 3ಃ ಹಬ್ 220 ಇಗಿ ಸಬ್‌ಸ್ಟೇಷನ್, ತ್ರಿಶೂಲಿ ಜಲವಿದ್ಯುತ್ ಕೇಂದ್ರ ಮತ್ತು ದೇವಿಘಾಟ್ ಜಲವಿದ್ಯುತ್ ಕೇಂದ್ರ ಪ್ರವಾಹದಿಂದ ಹಾನಿಗೊಳಗಾಗಿವೆ ಎಂದು ವರದಿ ಮಾಡಿದೆ. "ಈ ವಿಪತ್ತು ಪ್ರಾಧಿಕಾರದ ಉತ್ಪಾದನೆ, ಪ್ರಸರಣ ಮತ್ತು ವಿತರಣಾ ಸೌಲಭ್ಯಗಳನ್ನು ಹಾನಿಗೊಳಿಸಿದೆ... ಇದರ ಪರಿಣಾಮವಾಗಿ ವಿದ್ಯುತ್ ಸರಬರಾಜಿನಲ್ಲಿ ಅಡಚಣೆ ಉಂಟಾಗಿದೆ" ಎಂದು ಪ್ರಾಧಿಕಾರ ಹೇಳಿದೆ. ನೇಪಾಳದ ಹಲವಾರು ಹೆದ್ದಾರಿಗಳನ್ನು ಸಹ ಮುಚ್ಚಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನೇಪಾಳ ಪೊಲೀಸರು ಮತ್ತು ಇತರರು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ವೀಡಿಯೊಗಳು ಟಿಬೆಟ್‌ನ ಗಡಿಯಲ್ಲಿರುವ ಹಿಮಾಲಯ ದೇಶದ ಹಲವಾರು ಜಿಲ್ಲೆಗಳ ಪರ್ವತ ಕಣಿವೆಗಳ ಮೂಲಕ ಕೆಸರು ನೀರು ವೇಗವಾಗಿ ಹರಿಯುವುದನ್ನು ತೋರಿಸುತ್ತವೆ. ಈ ನೀರು ಗಂಡಕ್ ನದಿಯ ಮೂಲಕ ಬಿಹಾರದ ಆರು ಜಿಲ್ಲೆಗಳನ್ನು ತಲುಪಬಹುದು ಎಂಬ ಭಯವಿದೆ. ಈ ಹಿನ್ನೆಲೆಯಲ್ಲಿ, ಈ ಆರು ಜಿಲ್ಲೆಗಳು ಮತ್ತು ಓಆಖಈ ತಂಡವನ್ನು ಜಾಗರೂಕತೆಯಲ್ಲಿ ಇರಿಸಲಾಗಿದೆ.

# ಈದ್ ಮಿಲಾದ್: ಸಹೋದರತ್ವದ ಸಂದೇಶ ಸಮಾಜಕ್ಕೆ ಪ್ರೇರಣೆಯಾಗಲಿ: ಬಸವಂತಪ್ಪ

ಹಾಗೂ ಮಾನವೀಯತೆಯ ಸಂದೇಶವನ್ನು ಸಾರುತ್ತದೆ. ಪ್ರವಾದಿ ಮಹಮ್ಮದರ ಆದರ್ಶಗಳು ಸಮಾಜದಲ್ಲಿ ಪರಸ್ಪರ ಪ್ರೀತಿ, ಗೌರವ ಮತ್ತು ಸೌಹಾರ್ದ ಬೆಳೆಸಲು ಪ್ರೇರಣೆಯಾಗಲಿ ಎಂದು ಹಾರೈಸಿದರು. "ಈದ್ ಮಿಲಾದ್ ಸಂದರ್ಭದಲ್ಲಿ ದೇಶದ ಎಲ್ಲಾ ನಾಗರಿಕರಿಗೆ ಹಾಗೂ ದೇಶ-ವಿದೇಶಗಳಲ್ಲಿ ನೆಲೆಸಿರುವ ಮುಸ್ಲಿಂ ಬಾಂಧವರಿಗೆ ಹೃತ್ಪೂರ್ವಕ ಶುಭಾಶಯಗಳು. ಪ್ರವಾದಿ ಮಹಮ್ಮದರ ಸಹೋದರತ್ವ ಮತ್ತು ಸಹಾನುಭೂತಿಯ ಸಂದೇಶವು ನಮ್ಮೆಲ್ಲರಿಗೂ ಪ್ರೇರಣೆಯಾಗಲಿ. ಸಮಾಜದಲ್ಲಿ ಶಾಂತಿ, ಸೌಹಾರ್ದ ಹಾಗೂ ಸಾಮರಸ್ಯ ಮತ್ತಷ್ಟು ಗಟ್ಟಿಯಾಗಲಿ" ಎಂದು ಸಚಿವರು ಶುಭ ಹಾರೈಸಿದರು. ಸಚಿವರ ಆಗಮನದ ಸಂದರ್ಭದಲ್ಲಿ ಸ್ಥಳೀಯ ಮುಸ್ಲಿಂ ಮುಖಂಡರು ಹಾಗೂ ಬಾಂಧವರು ಅವರನ್ನು ಆತ್ಮೀಯವಾಗಿ ಬರಮಾಡಿಕೊಂಡು ಈದ್ ಮಿಲಾದ್ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಈ ಸಂದರ್ಭದಲ್ಲಿ ಮಸೀದಿ ಗುರುಗಳಾದ ಹುಸೇನ್ ಸಾಬ್, ಕೆ.ಸನಾವುಲ್ಲಾ ಸಾಬ್, ಸಿರಾಜ್ ಅಹಮದ್, ಎ.ಎನ್.ಸಾಧಿಕ್, ಚಮನ್ ಸಾಬ್, ಮಲ್ಲಿಕ್ ಸಾಬ್, ಗ್ರಾಪಂ ಮಾಜಿ ಅಧ್ಯಕ್ಷ ನಸರುಲ್ಲಾ, ಡಿ.ಎಂ.ಬಸವರಾಜ್, ಡಿ.ಎನ್.ಕರಿಬಸಪ್ಪ, ಕೆ.ರವಿ, ಎಚ್.ಎಸ್.ಪ್ರಕಾಶ್ ಸೇರಿದಂತೆ ಇನ್ನಿತರರಿದ್ದರು.

# ಅಸಮಾನತೆ ಇರುವವರೆಗೂ ಮೀಸಲಾತಿ ಅಗತ್ಯ

ಬುದ್ಧನ ಕಾಲದಿಂದಲೂ ಇಲ್ಲಿ ಜಾತಿ ವ್ಯವಸ್ಥೆ ಇದೆ, ಅದರ ವಿರುದ್ಧ ಸುಧಾರಣಾ ಚಳವಳಿಗಳು ನಡೆಯುತ್ತಿದೆ, ಇದು ಹೋಗಬೇಕು ಎಂದು ಎಲ್ಲರೂ ಹೇಳುತ್ತಾರೆ, ಆದರೂ ಇನ್ನೂ ಜಾತಿ ಜೀವಂತವಿದೆ ಎನ್ನುವುದು ವಿಪರ್ಯಾಸ ಎಂದು ಜಾತಿ ವ್ಯವಸ್ಥೆಯೆಡೆಗಿನ ತಮ್ಮ ಬೇಸರ ಹೊರಹಾಕಿದರು.

1949ರ ನವೆಂಬರ್ 25ರಂದು ಸಂವಿಧಾನ ಅಂಗೀಕಾರವಾಗುವ ಹಿಂದಿನ ದಿನ ಬಾಬಾ ಸಾಹೇಬ್ ಅಂಬೇಡ್ಕರ್ ಹೇಳಿದ್ದ "ನಮಗೆ ಸ್ವಾತಂತ್ರ್ಯ ಸಿಕ್ಕಿದೆ, ಸಮಾನತೆ ಎನ್ನುವುದು ಸಂವಿಧಾನದ ಆಶಯವಾಗಿದೆ. ಸಮಸಮಾಜ ನಿರ್ಮಾಣ ಆಗಲೇಬೇಕು. ನಮಗೆ ಮತದಾನದ ಹಕ್ಕು ಕೊಟ್ಟಿದ್ದಾರೆ, ರಾಷ್ಟ್ರಪತಿಯಿಂದ ಹಿಡಿದು ಸಾಮಾನ್ಯ ಪ್ರಜೆ-ಯ ವರೆಗೆ ಪ್ರತಿಯೊಬ್ಬರ ಮತಕ್ಕೂ ಒಂದೇ ಮೌಲ್ಯ ಇದೆ. ಆದರೆ ಇದೇ ಮಾದರಿಯ ಸಮಾನತೆ ಸಾಮಾಜಿಕವಾಗಿ, ಆರ್ಥಿಕವಾಗಿ ಸಾಧ್ಯವಾಗಿಲ್ಲ. ಇದನ್ನು ಸರಿಪಡಿಸದೇ ಹೋದರೆ ಅಸಮಾನತೆ ಮುಂದುವರೆಯುತ್ತದೆ, ಸಮಾನತೆ ಸಾಧ್ಯವಾಗದೆ ಹೋದರೆ ಮುಂದೊಂದು ದಿನ ಶೋಷಣೆಗೆ ಒಳಗಾದ ಜನರೇ ಪ್ರಭುತ್ವದ ಸೌಧವನ್ನು ಧ್ವಂಸ ಮಾಡುತ್ತಾರೆ" ಎನ್ನುವ ಮಾತನ್ನು ಸ್ಮರಿಸಿದರು. "ಇವನಾರವ, ಇವನಾರವ, ಇವನಾರವ ಎಂದೆನಿಸದಿರಯ್ಯ, ಇವ ನಮ್ಮವ, ಇವ ನಮ್ಮವ, ಇವ ನಮ್ಮವ ಎಂದೆನಿಸಯ್ಯ, ಎನ್ನ ಮನೆ ಮಗನೆಂದೆನಿಸಯ್ಯ ಕೂಡಲಸಂಗಮದೇವ" ಎಂದು 850 ವರ್ಷಗಳ ಹಿಂದೆ ಬಸವಣ್ಣನವರು ಹೇಳಿದ್ದರು, ಇಂದಿಗೂ ಇದು ಸಾಧ್ಯವಾಗಿಲ್ಲ. ಇದು ಸಮಾಜದ ನೈಜ ಚಿತ್ರಣ ಎಂದು ಬೇಸರ ವ್ಯಕ್ತಪಡಿಸಿದರು.

ನನಗೆ ಸಮಾಜ ಅರ್ಥಮಾಡಿಕೊಳ್ಳುವ ವಯಸ್ಸು ಆದಾಗಿನಿಂದ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ಮಾಡುತ್ತಲೇ ಇದ್ದೇನೆ. ಮುಂದೆಯೂ ಹೋರಾಟ ಮಾಡುತ್ತೇನೆ. ನಾನು ಬಿ.ಎಸ್.ಸಿ ಓದುವಾಗ ಕಾಲೇಜಿಗೆ ರಜೆ ಸಿಕ್ಕರೆ ಊರಿಗೆ ಹೋಗುತ್ತಿದ್ದೆ. ಮಧ್ಯಾಹ್ನದ ಹೊತ್ತಿಗೆ ನಮ್ಮ ತಂದೆ ನನಗೆ ಮನೇಲಿರುವ ದನ-ಕರುಗಳಿಗೆ ನೀರು ಹಾಕುವ ಕೆಲಸ ಕೊಡುತ್ತಿದ್ದರು. ಆಗ ಬಾವಿಯಿಂದ ನೀರನ್ನು ಮೇಲೆತ್ತಿ ಹಾಕಬೇಕಿತ್ತು, ಬಾವಿಯೊಳಗೆ ಗೂಡುಕಟ್ಟುತ್ತಿದ್ದ ಪಕ್ಷಿಗಳಿಂದಾಗಿ ನೀರಿನಲ್ಲಿ ಸಾಕಷ್ಟು ಕಸ ತುಂಬಿರುತ್ತಿತ್ತು, ನಾನು ಕೊಡವನ್ನು ಮೇಲೆ ಕೆಳಗೆ ಮಾಡಿ ಕಸವನ್ನು ಬದಿಗೆ ಸರಿಸಿ ನೀರು ಸೇದಿಕೊಂಡು ಹೋಗುತ್ತಿದ್ದೆ. ನಾನು ಮನೆಗೆ ಹೋಗಿ ಕೆಲ ಸಮಯ ಬಿಟ್ಟು ವಾಪಾಸು ಬರುವ ಹೊತ್ತಿಗೆ ಕಸ ಮತ್ತೆ ಬಾವಿಯ ಮಧ್ಯದಲ್ಲಿ ಬಂದಿರುತ್ತಿತ್ತು. ಇದೇ ರೀತಿ ಎಷ್ಟೇ ಸುಧಾರಣೆಗಳಾದರೂ ಜಾತಿ ವ್ಯವಸ್ಥೆ ಗಟ್ಟಿಯಾಗಿ ಉಳಿದುಕೊಂಡಿದೆ. ಹೀಗೆ ಸಿದ್ದರಾಮಯ್ಯ ಅವರು ತಮ್ಮ ಬಾಲ್ಯದ ನೆನಪನ್ನು ಜಾತಿ ವ್ಯವಸ್ಥೆಯ ಜಡತ್ವಕ್ಕೆ ಹೋಲಿಸಿ ವಿವರಿಸಿದರು.

# ಕೇಂದ್ರ ಸಂಪುಟ ಪುನರ್‌ರಚನೆಗೆ ಸಿದ್ಧತೆ; ಯುವ ಮುಖಗಳಿಗೆ ಆದ್ಯತೆ

ಒಟ್ಟು ಸದಸ್ಯರ ಶೇ.15ಕ್ಕೆ ಮೀರಬಾರದು. ಪ್ರಸ್ತುತ ಕೆಲವು ಸಚಿವ ಸ್ಥಾನಗಳು ಖಾಲಿ ಇರುವ ಹಿನ್ನೆಲೆಯಲ್ಲಿ ಹೊಸ ಮುಖಗಳಿಗೆ ಅವಕಾಶ ಕಲ್ಪಿಸುವ ಸಾಧ್ಯತೆ ಇದೆ.

2029ರ ಲೋಕಸಭಾ ಚುನಾವಣೆ ಹಾಗೂ ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಸಂಪುಟ ಪುನರ್‌ರಚನೆಗೆ ರಾಜಕೀಯ ಲೆಕ್ಕಾಚಾರಗಳು ನಡೆಯುತ್ತಿವೆ ಎನ್ನಲಾಗಿದೆ.

ಧರ್ಮೇಂದ್ರ ಪ್ರಧಾನ್ ಅವರು ಶಿಕ್ಷಣ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಹಾಗೂ ಜಾರ್ಜ್ ಕುರಿಯನ್ ಮತ್ತು ರವನೀತ್ ಸಿಂಗ್ ಅವರ ರಾಜ್ಯಸಭಾ ಅವಧಿ ಮುಕ್ತಾಯಗೊಂಡಿರುವುದರಿಂದ ಸಂಪುಟದಲ್ಲಿ ಕೆಲವು ಸ್ಥಾನಗಳು ತೆರವಾಗಿವೆ. ಈ ಸ್ಥಾನಗಳಿಗೆ ಹೊಸ ಮುಖಗಳನ್ನು ನೇಮಿಸುವ ಅನಿವಾರ್ಯತೆ ಎದುರಾಗಿದೆ.

ಹರ್ಷ್ ಮಲ್ಹೋತ್ರಾ ಹಾಗೂ ಪಂಕಜ್ ಚೌಧರಿ ಅವರನ್ನು ಕ್ರಮವಾಗಿ ದೆಹಲಿ ಮತ್ತು ಉತ್ತರ ಪ್ರದೇಶ ಬಿಜೆಪಿ ಘಟಕಗಳ ಅಧ್ಯಕ್ಷರನ್ನಾಗಿ ನೇಮಿಸಿರುವುದು ಹಾಗೂ ಪೀಯೂಷ್ ಗೋಯಲ್ ಅವರಿಗೆ ಪಕ್ಷದ ಖಜಾಂಚಿ ಜವಾಬ್ದಾರಿ ನೀಡಿರುವುದು ಸಂಪುಟ ಪುನರ್‌ರಚನೆಯ ಲೆಕ್ಕಾಚಾರದಲ್ಲಿ ಮಹತ್ವ ಪಡೆದಿದೆ. ಪಕ್ಷದ ಸಂಘಟನೆಯಲ್ಲಿ ಅನುಭವ ಹೊಂದಿರುವ ಕೆಲವು ಹಾಲಿ ಸಚಿವರಿಗೆ ಸಾಂಸ್ಥಿಕ ಜವಾಬ್ದಾರಿ ವಹಿಸುವ ಸಾಧ್ಯತೆಯೂ ಇದೆ ಎಂದು ಹೇಳಲಾಗುತ್ತಿದೆ.

ಪ್ರಸ್ತುತ ಕೆಲವು ಸಚಿವರು ಒಂದಕ್ಕಿಂತ ಹೆಚ್ಚು ಖಾತೆಗಳ ಹೊಣೆ ಹೊತ್ತಿದ್ದಾರೆ. ಅಮಿತ್ ಶಾ, ಜೆ.ಪಿ. ನಡ್ಡಾ, ಶಿವರಾಜ್ ಸಿಂಗ್ ಚೌಹಾಣ್, ಅಶ್ವಿನಿ ವೈಷ್ಣವ್ ಸೇರಿದಂತೆ ಹಲವು ಸಚಿವರ ಬಳಿ ಹೆಚ್ಚುವರಿ ಖಾತೆಗಳ ಜವಾಬ್ದಾರಿಯಿದೆ. ಸಚಿವರ ಮೇಲಿನ ಕೆಲಸದೊತ್ತಡವನ್ನು ಕಡಿಮೆ ಮಾಡಲು ಖಾತೆಗಳ ಮರುಹಂಚಿಕೆ ಮಾಡುವ ಸಾಧ್ಯತೆಯೂ ಇದೆ.

# ಭಾರತ ಧರ್ಮಛತ್ರವಲ್ಲ:

## ಕೇಂದ್ರ ಗೃಹ ಸಚಿವ ಅಮಿತ್ ಶಾ ಗುಡುಗು!

ಕಳೆದ ಎಂಟು ತಿಂಗಳುಗಳಲ್ಲಿ ನೆರೆ-ಯ ದೇಶಗಳೊಂದಿಗೆ ಭೂ ಗಡಿಯನ್ನು ಹಂಚಿಕೊಳ್ಳುವ ಎಲ್ಲ ರಾಜ್ಯಗಳಿಗೆ ಭೇಟಿ ನೀಡಲಾಗಿದೆ. ಗಡಿ ಭದ್ರತೆಗೆ ಸಂಬಂಧಿಸಿದ ನಾಲ್ಕು ಹಂತದ ಕಾರ್ಯತಂತ್ರದ ದಾಖಲೆಯನ್ನು ರಾಜ್ಯ ಸರ್ಕಾರಗಳೊಂದಿಗೆ ಹಂಚಿಕೊಳ್ಳಲಾಗಿದೆ. ಅತ್ಯಲ್ಪ ಅವಧಿಯಲ್ಲಿ ದೇಶವನ್ನು ಒಳನುಸುಳುಕೋರರಿಂದ ಮುಕ್ತಗೊಳಿಸುವುದು ನಮ್ಮ ಗುರಿಯಾಗಿದೆ. ಒಳನುಸುಳುವಿಕೆಯು ಕೇವಲ ಗಡಿ ನಿರ್ವಹಣೆಗೆ ಸಂಬಂಧಿಸಿದ ವಿಷಯವಲ್ಲ. ಬದಲಾಗಿ ಅದು ದೇಶದ ಭದ್ರತೆ, ಆರ್ಥಿಕತೆ ಮತ್ತು ಜನಸಂಖ್ಯಾ ರಚನೆಯ ಮೇಲೆ ವ್ಯಾಪಕ ಪರಿಣಾಮಗಳನ್ನು ಬೀರುತ್ತದೆ. ಅಕ್ರಮ ಒಳನುಸುಳುವಿಕೆ ಹಾಗೂ ಉದ್ಭವಿಸುತ್ತಿರುವ ಇತರ ಆಂತರಿಕ ಭದ್ರತಾ ಸವಾಲುಗಳನ್ನು ಗುರುತಿಸಿ ಎದುರಿಸಲು ಕೇಂದ್ರ ಮತ್ತು ರಾಜ್ಯಗಳ ನಡುವೆ ಬಲವಾದ ಸಮನ್ವಯದ ಅಗತ್ಯವಿದೆ ಎಂದು ಕೇಂದ್ರ ಗೃಹ ಸಚಿವರು ಪ್ರತಿಪಾದಿಸಿದರು. ಪ್ರಧಾನಿ ನರೇಂದ್ರ ಮೋದಿ, 2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸುವ ಗುರಿಯನ್ನು ಹೊಂದಿದ್ದಾರೆ. ಈ ಗುರಿಯನ್ನು ಸಾಧಿಸಲು ಬಲವಾದ ಆಂತರಿಕ ಭದ್ರತೆಯು ಅತ್ಯಗತ್ಯವಾದ ಮೊದಲ ಷರತ್ತಾಗಿದೆ. ಭಾರತವು ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಯಲ್ಲಿ ನಿಲ್ಲಬೇಕಾದರೆ, ಅದರ ಆಂತರಿಕ ಭದ್ರತೆಯನ್ನು ಮತ್ತಷ್ಟು ಬಲಪಡಿಸಬೇಕಾಗಿದೆ ಎಂದರು.

ಕ್ರಿಮಿನಲ್ ನ್ಯಾಯ ಸುಧಾರಣೆಗಳ ಕುರಿತು, ಮುಂದಿನ ವರ್ಷದೊಳಗೆ ಮೂರು ಹೊಸ ಕ್ರಿಮಿನಲ್ ಕಾನೂನುಗಳನ್ನು ಸಂಪೂರ್ಣವಾಗಿ ಜಾರಿಗೆ ತರುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಶಾ ಹೇಳಿದರು. ಮೂರು ವರ್ಷಗಳಲ್ಲಿ ಸುಪ್ರೀಂ ಕೋರ್ಟ್ ಮಟ್ಟದಲ್ಲಿ ಕ್ರಿಮಿನಲ್ ಪ್ರಕರಣಗಳನ್ನು ಪರಿಹರಿಸಬಹುದು ಮತ್ತು ಶಿಕ್ಷೆಯ ಪ್ರಮಾಣವನ್ನು ಶೇಕಡಾ 25 ರಷ್ಟು ಹೆಚ್ಚಿಸಬಹುದು ಎಂದು ಖಚಿತಪಡಿಸಿಕೊಳ್ಳಲು ಸುಧಾರಣೆಗಳನ್ನು ವಿನ್ಯಾಸಗೊಳಿಸಲಾಗಿದೆ ಎಂದು ಅವರು ಹೇಳಿದರು.

# ಮೇಕೆದಾಟು ಯೋಜನೆ ಒಳಿತು

ಅಧಿಕಾರ ವಹಿಸಿಕೊಂಡ ಬಳಿಕ ಅವರು ನೀಡಿದ ಮೊದಲ ಮಾಧ್ಯಮ ಸಂದರ್ಶನ ಇದಾಗಿದೆ. ಮೇಕೆದಾಟು ಯೋಜನೆಯಿಂದ ಸಂಗ್ರಹವಾಗುವ ನೀರಿನ ಶೇ.95ರಷ್ಟು ಭಾಗವನ್ನು ತಮಿಳುನಾಡಿನ ಬಳಕೆಗೆ ನೀಡಲಾಗುತ್ತದೆ. ಇದು ಆ ರಾಜ್ಯ-ಕ್ಕೆ ಜೀವರಕ್ಷಕವಾಗಲಿದೆ. ಪ್ರವಾಹದ ಸಂದರ್ಭದಲ್ಲಿ ವ್ಯರ್ಥವಾಗಿ ಸಮುದ್ರಕ್ಕೆ ಹರಿದುಹೋಗುವ ನೀರನ್ನು ಸಂಗ್ರಹಿಸಲು ಈ ಯೋಜನೆ ಸಹಕಾರಿಯಾಗಲಿದೆ ಎಂದು ಅವರು ಹೇಳಿದರು. ಈ ಜಲಾಶಯದ ನೀರನ್ನು ಕರ್ನಾಟಕವು ನೀರಾವರಿಗೆ ಬಳಸಿಕೊಳ್ಳಲು ಸಾಧ್ಯವಿಲ್ಲ. ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಕುಡಿಯುವ ನೀರಿನ ಅಗತ್ಯಕ್ಕಾಗಿ ನಿಗದಿಪಡಿಸಿರುವ 4.75 ಟಿಎಂಸಿ ನೀರನ್ನು ಮಾತ್ರ ಬಳಸಿಕೊಳ್ಳಲಾಗುತ್ತದೆ. ಸಾಮಾನ್ಯ ವರ್ಷಗಳಲ್ಲಿ ತಮಿಳುನಾಡಿಗೆ ಬಿಡುಗ-'ಡೆ ಮಾಡಬೇಕಾದ 177.25 ಟಿಎಂಸಿ ಕಾವೇರಿ ನೀರಿನ ಕುರಿತ ಸುಪ್ರೀಂ ಕೋರ್ಟ್ ನಿರ್ದೇಶನವನ್ನು ಸಂಪೂರ್ಣವಾಗಿ ಗೌರವಿಸಿ, ಪಾಲಿಸಲಾಗುವುದು ಎಂದು ಶಿವಕುಮಾರ್ ಪುನರುಚ್ಚರಿಸಿದರು. ಅಂತರರಾಜ್ಯ ಜಲ ವಿವಾದಗಳನ್ನು ಕಾನೂನು ಹೋರಾಟದ ಮೂಲಕ ಬಗೆಹರಿಸುವುದಕ್ಕಿಂತ ಪರಸ್ಪರ ಮಾತುಕತೆಯ ಮೂಲಕ ಪರಿಹರಿಸಿಕೊಳ್ಳುವುದು ಉತ್ತಮ. ತುಂಗಭದ್ರಾ ನದಿ ನೀರಿನ ಹಂಚಿಕೆ ವಿಚಾರವಾಗಿ ಆಂಧ್ರಪ್ರದೇಶ ಹಾಗೂ ತೆಲಂಗಾಣ ಮುಖ್ಯಮಂತ್ರಿಗಳೊಂದಿಗೆ ನಡೆಸಿದ ಸಕಾರಾತ್ಮಕ ಮಾತುಕತೆಯ ಮಾದರಿಯನ್ನು ಮೇಕೆದಾಟು ವಿಚಾರದಲ್ಲೂ ಅನುಸರಿಸಬಹುದು ಎಂದರು.

# ಓದು-ಬರಹ ವಿದ್ಯಾರ್ಥಿ ಬದುಕಿನ ಎರಡು ಕಣ್ಣುಗಳಿದ್ದಂತೆ: ಸಂತೋಷ ಬಂಡೆ



ಇಂಡಿ, ಆ. 26: ಓದು–ಬರಹವು ವಿದ್ಯಾರ್ಥಿ ಬದುಕಿನ ಎರಡು ಕಣ್ಣುಗಳಿದ್ದಂತೆ. ವಿದ್ಯಾರ್ಥಿಗಳು ಜೀವನದಲ್ಲಿ ನಿರ್ದಿಷ್ಟ ಗುರಿ ಹೊಂದಿ, ಗುರುಭಕ್ತಿ, ಶ್ರದ್ಧೆ, ಆಸಕ್ತಿ ಹಾಗೂ ಸ್ವಯಂಶಿಸ್ತಿನ ಗುಣಗಳನ್ನು ರೂಢಿಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಶಿಕ್ಷಕ ಹಾಗೂ ಸಾಹಿತಿ ಸಂತೋಷ ಬಂಡೆ ಹೇಳಿದರು.

ತಾಲೂಕಿನ ಮಾರ್ಸನಳ್ಳಿ ಗ್ರಾಮದ ವಿದ್ಯಾರಣ್ಯ ಪಬ್ಲಿಕ್ ಶಾಲೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕಲಿಕಾ ಪುನಶ್ಚೇತನ ಕಾರ್ಯಾಗಾರ ಹಾಗೂ ಪಾಲಕರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ವಿದ್ಯಾರ್ಜನೆಯೇ ವಿದ್ಯಾರ್ಥಿ ಜೀವನದ ಪ್ರಮುಖ ಗುರಿಯಾಗಿದ್ದು, ಮಕ್ಕಳಲ್ಲಿ ಶಿಸ್ತು ಮತ್ತು ಸಂಸ್ಕಾರ ಬೆಳೆಸುವುದು ಅತ್ಯಂತ ಅಗತ್ಯ. ಸಕಾರಾತ್ಮಕ ಚಿಂತನೆ ಬೆಳೆಸುವ ಮೂಲಕ ಸದೃಢ ಹಾಗೂ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಶಿಕ್ಷಣ ಮಹತ್ವದ ಪಾತ್ರ ವಹಿಸುತ್ತದೆ ಎಂದರು.

ವಿದ್ಯಾರ್ಥಿಗಳು ಓದು, ಬರಹ ಹಾಗೂ ಜ್ಞಾನವರ್ಧನೆಯ ಜೊತೆಗೆ ಬದು–ಕಿಗೆ ಅಗತ್ಯವಾದ ಮಾನವೀಯ ಮೌಲ್ಯಗಳು ಮತ್ತು ಉತ್ತಮ ಗುಣಗಳನ್ನು ಬೆಳೆಸಿಕೊಂಡು ಸಮಾಜದ ಉತ್ತಮ ಪ್ರಜೆಗಳಾಗಬೇಕು ಎಂದು ಸಲಹೆ ನೀಡಿದರು.

ಶಾಲೆಯ ನಿರ್ದೇಶಕ ಹಾಗೂ ಮುಖ್ಯ ಶಿಕ್ಷಕ ಮಲ್ಲಿಕಾರ್ಜುನ ಗುಡ್ಡಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಮಕ್ಕಳು ಕುಟುಂಬ, ಸಮಾಜ ಹಾಗೂ ದೇಶದ ಆಸ್ತಿಯಾಗುವಂತೆ ಪಾಲಕರು ಮತ್ತು ಶಿಕ್ಷಕರು ಶ್ರಮಿಸಬೇಕು. ವಿದ್ಯಾರ್ಥಿಗಳು ಪರಿಶ್ರಮ, ಪ್ರಾಮಾಣಿಕತೆ ಹಾಗೂ ವಿನಯದಂತಹ ಗುಣಗಳನ್ನು ಮೈಗೂಡಿಸಿಕೊಂಡು ದೇಶದ ಸತ್ಪ್ರಜೆಗಳಾಗಬೇಕು ಎಂದರು.

ಶಾಲೆಯ ಅಧ್ಯಕ್ಷ ಮಹಾದೇವ ಗುಡ್ಡಳ್ಳಿ, ಶಿಕ್ಷಕಿ ಅಂಬಿಕಾ ಗುಡ್ಡಳ್ಳಿ, ಪಾಲಕರಾದ ನಿಂಗನಗೌಡ ಬಿರಾದಾರ, ಚಂದು ಪೂಜಾರಿ, ಅಶೋಕ ಮಿರಗಿ, ಇಸ್ಮಾಯಿಲ್ ವಾಲೀಕಾರ ಸೇರಿದಂತೆ ಪಾಲಕರು, ತಾಯಂದಿರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಉಮಾಶ್ರೀ ತೆಗ್ಗಳ್ಳಿ ನಿರೂಪಿಸಿದರು. ಆರತಿ ಕೇರಳ ವಂದಿಸಿದರು.

# ದಸರಾದಲ್ಲಿ ಕಂಬಳ ಇರುತ್ತದೆ: ಯತೀಂದ್ರ





ಮೈಸೂರು: ಈ ಬಾರಿಯ ದಸರಾದಲ್ಲಿ ಕಂಬಳ ಇರುತ್ತದೆ ಎಂದು ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ.

ವೀರನಹೊಸಹಳ್ಳಿಯಲ್ಲಿ ಗಜಪಯಣಕ್ಕೆ ಚಾಲನೆ ನೀಡಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ಜಾಗ ಗುರುತು ಮಾಡಿರುವ ಜಾಗದಲ್ಲಿ ಕಂಬಳ ನಡೆ–ಯುತ್ತದೆ. ಸಿಎಂ ಕೂಡ ಕಂಬಳ ನಡೆಸಿ ಎಂದು ಸೂಚನೆ ಕೊಟ್ಟಿದ್ದಾರೆ ಎಂದರು.

ಇಂದು ಗಜಪಯಣ ಆರಂಭವಾಗಿದೆ. ವೀರನಹೊಸಹಳ್ಳಿಯಲ್ಲಿ ಪೂಜೆ ಸಲ್ಲಿಸಲಾಗಿದೆ. 25 ವರ್ಷಗಳಿಂದ ದಸರಾದಲ್ಲಿ ಅಭಿಮನ್ಯು ಭಾಗಿಯಾಗಿತ್ತು. ಈ ಬಾರಿ ಅಭಿಮನ್ಯು ನಿವೃತ್ತಿಯಾಗಿದೆ. ಅಭಿಮನ್ಯು 6 ಬಾರಿ ಅಂಬಾರಿ ಹೊತ್ತಿತ್ತು. ಹೀಗಾಗಿ ಅಭಿಮನ್ಯುವಿಗೆ ಪೂಜೆ ಸಲ್ಲಿಸಿ ಬೀಳ್ಕೊಡುಗೆ ಕೊಡಲಾಗಿದೆ. ನಿಶಾನೆ ಆನೆಯಾಗಿ ಅಭಿಮನ್ಯು ಕರೆತರುವ ಬಗ್ಗೆ ಇನ್ನೂ ಫೈನಲ್ ಆಗಿಲ್ಲ. ಸಾಧ್ಯತೆಗಳನ್ನು ನೋಡಿಕೊಂಡು ಆ ಬಗ್ಗೆ ತೀರ್ಮಾನ ಮಾಡುತ್ತೇವೆ. ಈ ಬಾರಿ ಅಂಬಾರಿ ಹೊರುವ ಆನೆಯನ್ನು ಇನ್ನೂ ಆಯ್ಕೆ ಮಾಡಿಲ್ಲ. ತಾಲೀಮು ನಡೆಸಿದ ಬಳಿಕ ಅದನ್ನು ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

# ಸಂಭ್ರಮಾಚರಣೆ, ಮೆರವಣಿಗೆ ಮಾಡದಿರಲು ವಿನಯ್ ಮನವಿ



ಧಾರವಾಡ: ಹೆಬ್ಬಳ್ಳಿ ಜಿಲ್ಲಾ ಪಂಚಾಯತ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದದ ಆರೋಪಿ ಶಾಸಕ ವಿನಯ ಕುಲಕರ್ಣಿ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಧಾರವಾಡ ಜಿಲ್ಲಾ ಪ್ರವೇಶಕ್ಕೆ ಅನುಮತಿ ನೀಡಿದ್ದರಿಂದ ಶಾಸಕ ವಿನಯ ಕುಲಕರ್ಣಿ ಧಾರವಾಡ ಪ್ರವೇಶಕ್ಕೆ ಯಾವುದೇ ಅಡತಡೆ ಇಲ್ಲದಂತಾಗಿದೆ. ವಿನಯ್ ಕುಲಕರ್ಣಿ ಕುಟುಂಬದ ಸದಸ್ಯರು ನ್ಯಾಯಾಲಯದ ತೀರ್ಪಿಗೆ ಹರ್ಷ ವ್ಯಕ್ತಪಡಿಸಿದ್ದಾರೆ. ಅಭಿಮಾನಿಗಳು ಕೂಡ ವಿನಯ್ ಕುಲಕರ್ಣಿ ಅವರು ತಮ್ಮ ಕ್ಷೇತ್ರಕ್ಕೆ ಬರುವುದನ್ನು ಕಾಯುತ್ತಿದ್ದಾರೆ. ಆದರೆ ಯಾವುದೇ ಸಂಭ್ರಮಾಚರಣೆ ಹಾಗೂ ಮೆರವಣಿಗೆ ಮಾಡದಂತೆ ನ್ಯಾಯಲಯ ನಿರ್ದೇಶನ ನೀಡಿದ ಹಿನ್ನೆಲೆಯಲ್ಲಿ ಸಂಭ್ರಮಾಚರಣೆ ಮಾಡದಂತೆ ಶಾಸಕ ವಿನಯ ಕುಲಕರ್ಣಿ ಅಭಿಮಾನಿಗಳಲ್ಲಿ ಕೋರಿದ್ದಾರೆ. ಕ್ಷೇತ್ರದ ಅಭಿವೃದ್ಧಿ ಪರ ಹಾಗೂ ಸಮಸ್ಯೆಗಳನ್ನು ಆಲಿಸಲು ಸದಾ ನಿಮ್ಮೊಂದಿಗೆ ಇರುತ್ತೇನೆ ಎಂದು ಶಾಸಕ ವಿನಯ ಕುಲಕರ್ಣಿ ಮನವಿಯಲ್ಲಿ ತಿಳಿಸಿದ್ದಾರೆ. ಸಂವಿಧಾನಾತ್ಮಕ ವ್ಯವಸ್ಥೆ ಮತ್ತು ನ್ಯಾಯಾಲಯದ ಮೇಲೆ ನನಗೆ ಸಂಪೂರ್ಣ ಗೌರವವಿದೆ.

ಕಳೆದ ಕೆಲವು ವರ್ಷಗಳಿಂದ ನನ್ನ ಕ್ಷೇತ್ರದ ಜನತೆ ಹಾಗೂ ಆತ್ಮೀಯ ಅಭಿಮಾನಿಗಳು ಪಟ್ಟಿರುವ ಶ್ರಮ, ತೋರಿದ ನಂಬಿಕೆ ಮತ್ತು ನಿರಂತರ ಬೆಂಬಲಕ್ಕೆ ನಾನು ಸದಾ ಚಿರಋಣಿಯಾಗಿದ್ದೇನೆ. ಆಶೀರ್ವಾದದಿಂದಲೇ ಇಂದು ನನ್ನ ಶಾಸಕ ಸ್ಥಾನವು ಮರುಸ್ಥಾಪನೆಯಾಗಿದ್ದು, ಕ್ಷೇತ್ರದ ಜನತೆಯ ಸೇವೆ ಮಾಡಲು ಮತ್ತೊಮ್ಮೆ ಅವಕಾಶ ಸಿಕ್ಕಿದೆ ಎಂದು ತಿಳಿಸಿದ್ದಾರೆ.

# ಹಳೆ ಪಿಂಚಣಿ ಜಾರಿಗೆ ಆಗ್ರಹ: ಡಿ.12ರಂದು ದೆಹಲಿ ಚಲೋ

## ಸರ್ಕಾರಿ ನೌಕರರ ಬೇಡಿಕೆ ಈಡೇರಿಸಲು ಕೇಂದ್ರ–ರಾಜ್ಯ ಸರ್ಕಾರಗಳ ಮೇಲೆ ಒತ್ತಡ | ವಿಜಯಪುರದಲ್ಲಿ ಒಕ್ಕೂಟದ ಕರೆ

ವಿಜಯಪುರ, ಆ. 26: ಎನ್‌ಪಿಎಸ್/ಯುಪಿಎಸ್ ಪಿಂಚಣಿ ಪದ್ಧತಿ ರದ್ದುಪಡಿಸಿ ಹಳೆಯ ನಿಶ್ಚಿತ ಪಿಂಚಣಿ ವ್ಯವಸ್ಥೆ ಜಾರಿಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿ–ಕೆಗೆ ಆಗ್ರಹಿಸಿ ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟದ ನೇತೃತ್ವದಲ್ಲಿ ಡಿಸೆಂಬರ್ 12ರಂದು ದೆಹಲಿ ಚಲೋ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ರಾಜ್ಯಾಧ್ಯಕ್ಷ ಜೈಕುಮಾರ್ ಎಚ್.ಎಸ್. ತಿಳಿಸಿದರು.

ನಗರದ ಸಾಯಿ ಗ್ರ್ಯಾಂಡ್ ಹೋಟೆಲ್ ಸಭಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರಿ ನೌಕರರ ಪ್ರಮುಖ ಬೇಡಿಕೆಗಳನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಿರ್ಲಕ್ಷಿಸುತ್ತಿವೆ. ನೌಕರರ ಭವಿಷ್ಯದ ಭದ್ರತೆಗೆ ಧಕ್ಕೆ ತರುವ ಪಿಂಚಣಿ ವ್ಯವಸ್ಥೆ ಮುಂದುವರಿಸುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಹಳೆ ಪಿಂಚಣಿ ಜಾರಿಗೆ ಆಗ್ರಹ :**

ಪಿಎಫ್‌ಆರ್‌ಡಿಎ ಕಾಯ್ದೆಯಡಿ ಜಾರಿಯಲ್ಲಿರುವ ಎನ್‌ಪಿಎಸ್/ಯುಪಿಎಸ್ ಪದ್ಧತಿಯಲ್ಲಿ ನೌಕರರು ಹಾಗೂ ಸರ್ಕಾರದ ವಂತಿಗೆ ಹಣವನ್ನು ಷೇರು ಮಾರುಕಟ್ಟೆಗೆ ಹೂಡಿಕೆ ಮಾಡಲಾಗುತ್ತಿದೆ. ಆದರೆ ನಿವೃತ್ತಿಯ ನಂತರ ನೌಕರರಿಗೆ ಸಮರ್ಪಕ ಪಿಂಚಣಿ ಭದ್ರತೆ ಸಿಗುತ್ತಿಲ್ಲ. ಹೀಗಾಗಿ ಎನ್‌ಪಿಎಸ್/ಯುಪಿಎಸ್ ರದ್ದುಪಡಿಸಿ ಹಳೆಯ ನಿಶ್ಚಿತ ಪಿಂಚಣಿ ವ್ಯವಸ್ಥೆಯನ್ನೇ ಮರುಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

**2.80 ಲಕ್ಷ ಹುದ್ದೆ ಖಾಲಿ; ಯುವಕರಿಗೆ ಅನ್ಯಾಯ :**

ರಾಜ್ಯದ ವಿವಿಧ ಇಲಾಖೆಗಳಲ್ಲಿರುವ ಸುಮಾರು 2.80 ಲಕ್ಷ ಖಾಲಿ ಹುದ್ದೆಗಳನ್ನು ಹೊರಗುತ್ತಿಗೆ, ಗುತ್ತಿಗೆ, ದಿನಗೂಲಿ ಹಾಗೂ ಅರೆಕಾಲಿಕ ಆಧಾರದಲ್ಲಿ ಭರ್ತಿ ಮಾಡಲಾಗುತ್ತಿದೆ. ಇದರಿಂದ ವಿದ್ಯಾವಂತ ಯುವಜನತೆಗೆ ಶಾಶ್ವತ ಉದ್ಯೋಗದ ಅವಕಾಶ ಕಸಿದುಕೊಳ್ಳಲಾಗುತ್ತಿದೆ. ಖಾಲಿ ಹುದ್ದೆಗಳನ್ನು ನಿಯಮಾನುಸಾರ



ಶಾಶ್ವತವಾಗಿ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.

**ಆರೋಗ್ಯ ಯೋಜನೆ ಸಮರ್ಪಕವಾಗಿ ಜಾರಿಯಾಗಲಿ :**

ರಾಜ್ಯ ಸರ್ಕಾರದ ನಗದುರಹಿತ ಆರೋಗ್ಯ ಸಂಜೀವಿನಿ ಯೋಜನೆ ಸಮರ್ಪಕವಾಗಿ ಅನುಷ್ಠಾನಗೊಳ್ಳದ ಪರಿಣಾಮ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬಸ್ಥರು ಖಾಸಗಿ ಆಸ್ಪತ್ರೆಗಳಲ್ಲಿ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ ನೌಕರರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಬೇಕು ಎಂದು ಒತ್ತಾಯಿಸಿದರು. ಸುಪ್ರೀಂ ಕೋರ್ಟ್ ತೀರ್ಪಿನ ಹಿನ್ನೆಲೆಯಲ್ಲಿ ಟಿಇಟಿ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ಶಿಕ್ಷಕರಲ್ಲಿ ಉದ್ಯೋಗ ಕಳೆದುಕೊಳ್ಳುವ ಆತಂಕ ನಿರ್ಮಾಣವಾಗಿದೆ. ಅವರ ಸಮಸ್ಯೆಯನ್ನು ಮಾನವೀಯ ನೆಲೆಯಲ್ಲಿ ಪರಿಗಣಿಸಿ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಅವರು ಹೇಳಿದರು.

ಇದಲ್ಲದೆ, ಕೋವಿಡ್ ಅವಧಿಯ 18 ತಿಂಗಳ ತುಟ್ಟಿಭತ್ಯೆ ಬಾಕಿಯನ್ನು ಕೂಡಲೇ ಬಿಡುಗಡೆ ಮಾಡಬೇಕು, ಹೊರಗುತ್ತಿಗೆ, ಗುತ್ತಿಗೆ ಹಾಗೂ ದಿನಗೂಲಿ ನೌಕರರಿಗೆ ಅರ್ಹತೆ ಆಧಾರದಲ್ಲಿ ವಿಶೇಷ ಪ್ರಾತಿನಿಧ್ಯ ನೀಡಿ ಖಾಯಂ ನೇಮಕಾತಿ ಮಾಡಬೇಕು. ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದರು.

**ಡಿ.12ಕ್ಕೆ ದೆಹಲಿ ಚಲೋ:**

ಅಖಿಲ ಭಾರತ ರಾಜ್ಯ ಸರ್ಕಾರಿ ನೌಕರರ ಒಕ್ಕೂಟ ನೀಡಿರುವ ಕರೆಯ ಹಿನ್ನೆಲೆಯಲ್ಲಿ ಡಿ.12ರಂದು ದೆಹಲಿಯಲ್ಲಿ ಬೃಹತ್ ಪ್ರತಿಭಟನೆ ನಡೆಯಲಿದೆ. ರಾಜ್ಯದ ಸರ್ಕಾರಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಒಕ್ಕೂಟ ಕರೆ ನೀಡಿದೆ. ಸುದ್ದಿಗೋಷ್ಠಿಯಲ್ಲಿ ಮಹಾದೇವಯ್ಯ ಮಠಪತಿ, ಗೌರವಾಧ್ಯಕ್ಷ ಚಂದ್ರಶೇಖರ ಲೆಂಡಿ, ಜಿಲ್ಲಾ ಗೌರವಾಧ್ಯಕ್ಷ ಅಶೋಕ ಇಳಕಲ್, ಜಿಲ್ಲಾಧ್ಯಕ್ಷ ಸುರೇಶ ಜಿ.ಬಿ., ನಿವೃತ್ತ ನೌಕರರ ಒಕ್ಕೂಟದ ಸಂಯೋಜಕ ದಾಕ್ಷಾಯಿಣಿ ಹುಡೇದ್, ಎನ್‌ಇಸಿ ಸದಸ್ಯ ಬಸನಗೌಡ ಎಸ್.ಆರ್., ಮೆಣಸಗಿ, ಎಂ.ಎಂ. ಪಾಟೀಲ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದೇಶಸೇವೆಗೆ ಬದುಕು ಮುಡಿಪಿಟ್ಟ ಹರ್ಡೀಕರ್: ಬಿ. ಎಂ. ಕೋಕರೆ



ವಿಜಯಪುರ, ಆ.26: ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಯುವಜನರಲ್ಲಿ ಹೊತ್ತಿಸಿ, ಸಂಘಟಿತ ಶಕ್ತಿ ಮತ್ತು ಶಿಸ್ತಿನ ಮೂಲಕ ದೇಶಸೇವೆಗೆ ಹೊಸ ಆಯಾಮ ನೀಡಿದ ಭಾರತ ಸೇವಾದಳದ ಸಂಸ್ಥಾಪಕ ಡಾ. ಎನ್.ಎಸ್. ಹರ್ಡೀಕರ್ ಅವರ ಜೀವನ ಇಂದಿನ ಪೀಳಿಗೆಗೆ ಶಾಶ್ವತ ಪ್ರೇರಣೆಯಾಗಿದೆ ಎಂದು ಸೇವಾದಳದ ಜಿಲ್ಲಾ ಸಮಿತಿ ಸದಸ್ಯ ಬಿ.ಎಂ. ಕೋಕರೆ ಹೇಳಿದರು.

ನಗರದ ಭಾರತ ಸೇವಾದಳ ಜಿಲ್ಲಾ ಕಚೇರಿಯಲ್ಲಿ ಬುಧವಾರ ನಡೆದ ಡಾ. ಎನ್.ಎಸ್. ಹರ್ಡೀಕರ್ ಅವರ 51ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಹರ್ಡೀಕರ್ ಅವರ ವಿಚಾರಧಾರೆ ಕೇವಲ ಸ್ಮರಣೆಗೆ ಸೀಮಿತವಾಗಬಾರದು. ಅವರ ತತ್ವ, ಶಿಸ್ತು, ಕರ್ತವ್ಯಪ್ರಜ್ಞೆ, ತ್ಯಾಗ ಮತ್ತು ದೇಶಪ್ರೇಮವನ್ನು ನಮ್ಮ ನಿತ್ಯದ ಬದುಕಿನಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದು ಹೇಳಿದರು.

**ವೈದ್ಯರಾಗಿದ್ದರೂ ದೇಶಸೇವೆಯನ್ನೇ ಆಯ್ದುಕೊಂಡರು :**

1889ರ ಮೇ 7ರಂದು ಹಾವೇರಿ ಜಿಲ್ಲೆಯ ಹಾನಗಲ್ ತಾಲೂಕಿನ ತಿಲುವಳ್ಳಿ ಗ್ರಾಮದಲ್ಲಿ ಜನಿಸಿದ ಡಾ. ನಾರಾಯಣ ಸುಬ್ಬಾರಾವ್ ಹರ್ಡೀಕರ್ ಅವರು ವೃತ್ತಿಯಲ್ಲಿ ವೈದ್ಯರಾಗಿದ್ದರು. ಆದರೆ ವೈಯಕ್ತಿಕ ಸುಖ–ಸೌಲಭ್ಯಗಳಿಗೆ ಸೀಮಿತವಾಗದೆ, ದೇಶದ ಸ್ವಾತಂತ್ರ್ಯ ಮತ್ತು ಜನಸೇವೆಯನ್ನು ತಮ್ಮ ಬದುಕಿನ ಮಹತ್ವದ ಧ್ಯೇಯವನ್ನಾಗಿ ಮಾಡಿಕೊಂಡರು.

ಮಹಾತ್ಮ ಗಾಂಧೀಜಿ ಹಾಗೂ ಪಂಡಿತ ಜವಾಹರಲಾಲ್ ನೆಹರೂ ಅವರೊಂದಿಗೆ ಕೈಜೋಡಿಸಿ 1923ರಲ್ಲಿ 'ಹಿಂದುಸ್ತಾನಿ ಸೇವಾದಳ'ವನ್ನು ಸ್ಥಾಪಿಸಿದ ಹರ್ಡೀಕರ್, ಯುವಕರಲ್ಲಿ ದೇಶಭಕ್ತಿ, ಶಿಸ್ತು, ಸೇವಾ ಮನೋಭಾವ ಮತ್ತು ಸಂಘಟನಾ ಸಾಮರ್ಥ್ಯ ಬೆಳೆಸಲು ಶ್ರಮಿಸಿದರು.

1924ರಲ್ಲಿ ಬೆಳಗಾವಿಯಲ್ಲಿ ನಡೆದ ಅಖಿಲ ಭಾರತ ಕಾಂಗ್ರೆಸ್ ಅಧಿವೇಶನದ ಜವಾಬ್ದಾರಿಗಳನ್ನು ಅತ್ಯಂತ ಶಿಸ್ತು ಮತ್ತು ಅಚ್ಚುಕಟ್ಟಿನಿಂದ ನಿರ್ವಹಿಸುವ ಮೂಲಕ ತಮ್ಮ ಸಂಘಟನಾ ಸಾಮರ್ಥ್ಯವನ್ನು ತೋರಿಸಿದರು. ಸ್ವಾತಂತ್ರ್ಯ ಚಳವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಹಲವು ಬಾರಿ ಜೈಲುವಾಸ ಅನುಭವಿಸಿದರು. ನಂತರ ರಾಜ್ಯಸಭಾ ಸದಸ್ಯರಾಗಿಯೂ ದೇಶಸೇವೆ ಸಲ್ಲಿಸಿದರು.

**ಯುವಕರಿಗೆ ಹರ್ಡೀಕರ್ ಸಂದೇಶ ಇಂದಿಗೂ ಪ್ರಸ್ತುತ :**

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸೇವಾದಳದ ಜಿಲ್ಲಾ ಅಧ್ಯಕ್ಷ ಎಸ್.ಪಿ. ಬಿರಾದಾರ (ಕಡ್ಲೇವಾಡ) ಮಾತನಾಡಿ, ಹರ್ಡೀಕರ್ ಅವರ ಬದುಕು ಸಮರ್ಪಣೆ, ತ್ಯಾಗ, ಕರ್ತವ್ಯ ಮತ್ತು ಶಿಸ್ತಿನ ಅಪೂರ್ವ ಮಾದರಿ. ಅವರು ನಂಬಿದ್ದ ಮೌಲ್ಯಗಳನ್ನು ಕೇವಲ ಭಾಷಣಗಳಲ್ಲಿ ಸ್ಮರಿಸುವ ಬದಲು ಸಮಾಜದಲ್ಲಿ ಕಾರ್ಯರೂಪಕ್ಕೆ ತರಬೇಕು ಎಂದು ಹೇಳಿದರು.

ಭಾರತ ಸೇವಾದಳದ ವಲಯ ಸಂಘಟಕ ನಾಗೇಶ ಡೋಣೂರ ಮಾತನಾಡಿ, ಇಂದಿನ ಯುವಕರಲ್ಲಿ ಅಪಾರ ಪ್ರತಿಭೆ, ಧೈರ್ಯ, ಜಿಗುಟುತನ ಮತ್ತು ಚೈತನ್ಯವಿದೆ. ಆದರೆ ಈ ಶಕ್ತಿಗೆ ಸರಿಯಾದ ದಿಕ್ಕು ನೀಡಲು ವೈಯಕ್ತಿಕ ಶಿಸ್ತು, ಸಾಮಾಜಿಕ ಜವಾಬ್ದಾರಿ ಹಾಗೂ ರಾಷ್ಟ್ರೀಯ ಚಾರಿತ್ರ್ಯ ಅತ್ಯಗತ್ಯ. ಯುವಶಕ್ತಿಯನ್ನು ರಾಷ್ಟ್ರ ನಿರ್ಮಾಣದ ಶಕ್ತಿಯನ್ನಾಗಿ ಪರಿವರ್ತಿಸುವುದೇ ಹರ್ಡೀಕರ್ ಅವರ ಚಿಂತನೆಯ ಸಾರ ಎಂದರು.

ಯುವಕರು ಹರ್ಡೀಕರ್ ಅವರ ಜೀವನವನ್ನು ಕೇವಲ ಇತಿಹಾಸದ ಒಂದು ಅಧ್ಯಾಯವಾಗಿ ನೋಡದೆ, ದೇಶದ ಬಗ್ಗೆ ಕರ್ತವ್ಯ, ಸಮಾಜದ ಬಗ್ಗೆ ಜವಾಬ್ದಾರಿ ಹಾಗೂ ಬದುಕಿನಲ್ಲಿ ಶಿಸ್ತಿನ ಅಗತ್ಯವನ್ನು ಕಲಿಸುವ ಪಾಠವಾಗಿ ಸ್ವೀಕರಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾರತೀಯ ಕಿಸಾನ್ ಸಂಘದ ಉತ್ತರ ಪ್ರಾಂತದ ಉಪಾಧ್ಯಕ್ಷ ಮಲ್ಲನಗೌಡ ಪಾಟೀಲ, ರೈತ ಮುಖಂಡರಾದ ಭೀಮಾಶಂಕರ ನಿಕ್ಕಂ, ಮಲ್ಲನಗೌಡ ಕಾಮಗೊಂಡ, ಎಸ್.ಎಂ. ಬಿರಾದಾರ, ವಿಶಾಲ ಬಿರಾದಾರ, ಜಿ.ಎಸ್. ಬಗಲಿ, ಭಾರತ ಸೇವಾದಳದ ಜಿಲ್ಲಾ ಹಾಗೂ ತಾಲೂಕು ಸಮಿತಿ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

ಭಾರತ ಸೇವಾದಳದ ಸಂಪನ್ಮೂಲ ಶಿಕ್ಷಕ ಆರ್.ವಿ. ಚೌವಾಣ್ ಕಾರ್ಯಕ್ರಮ ನಿರೂಪಿಸಿದರು. ಶಿಕ್ಷಕ ಎ.ಎಂ. ಖುದಾನಪೂರ ಸ್ವಾಗತಿಸಿ ವಂದಿಸಿದರು.

ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಗೆ

ಚಂದಾದಾರರಾಗಲು ಹಾಗೂ ಜಾಹೀರಾತು

ನೀಡಲು ಇಚ್ಚಿಸುವವರು ಸಂಪರ್ಕಿಸಿ

# ಬಿಸಿಯೂಟ ಸೇವಿಸಿ 51 ವಿದ್ಯಾರ್ಥಿಗಳು, ಇಬ್ಬರು ಶಿಕ್ಷಕರು ಅಸ್ವಸ್ಥ

ರಾಯಚೂರು: ಬಿಸಿಯೂಟ ಸೇವಿಸಿದ 51 ವಿದ್ಯಾರ್ಥಿಗಳು ಹಾಗೂ ಇಬ್ಬರು ಅತಿಥಿ ಶಿಕ್ಷಕರು ಸೇರಿದಂತೆ ಸುಮಾರು 53 ಜನರು ಅಸ್ವಸ್ಥಗೊಂಡಿರುವ ಘಟನೆ ಮಂಗಳವಾರ ತಾಲ್ಲೂಕಿನ ಮಲ್ಲಾಪುರ ಗ್ರಾಮದಲ್ಲಿ ನಡೆದಿದೆ.

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಧ್ಯಾಹ್ನ ವಿದ್ಯಾರ್ಥಿಗಳಿಗೆ ಬಿಸಿಯೂಟವಾಗಿ ಚಿತ್ರಾನ್ನ ಸಿದ್ಧಪಡಿಸಲಾಗಿತ್ತು. ಚಿತ್ರಾನ್ನ ಸೇವಿಸಿದ ಕೆಲವೇ ಹೊತ್ತಿನಲ್ಲಿ ವಿದ್ಯಾರ್ಥಿಗಳಿಗೆ ತಲೆಸುತ್ತು, ವಾಂತಿ, ಹೊಟ್ಟೆನೋವು ಕಾಣಿಸಿಕೊಂಡಿದೆ.

ಕೂಡಲೇ ಎಚ್ಚೆತ್ತುಕೊಂಡ ಶಾಲಾ ಸಿಬ್ಬಂದಿ ಮತ್ತು ಗ್ರಾಮಸ್ಥರು ಎಲ್ಲಾ ಮಕ್ಕಳನ್ನು ಅರಕೇರಾ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದ್ದಾರೆ. ಸದ್ಯ ಎಲ್ಲ ವಿದ್ಯಾರ್ಥಿಗಳಿಗೆ ಚಿಕಿತ್ಸೆ ಮುಂದುವರೆದಿದೆ. ಕೆಲ ಮಕ್ಕಳ ಸ್ಥಿತಿ ಗಂಭೀರವಾಗಿದ್ದರೂ ಯಾವುದೇ ಅಪಾಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ. ಪಾಲಕರ ಆಕ್ರೋಶ: ಶಾಲೆಯಲ್ಲಿ ಬಿಸಿಯೂಟ ತಯಾರಿಕೆಯಲ್ಲಿ ಕಲುಷಿತಗೊಂಡ ನೀರನ್ನು ಬಳಸಿ ಚಿತ್ರಾನ್ನ ತಯಾರಿಸಲಾಗಿದೆ ಎಂಬ ಶಂಕೆ ವ್ಯಕ್ತಪಡಿಸುತ್ತಿದ್ದಾರೆ. ಬಿಸಿಯೂಟ ಉಸ್ತುವಾರಿ ನೋಡಿಕೊಳ್ಳಬೇಕಾದ ಅಧಿಕಾರಿಗಳು ನಿರ್ಲಕ್ಷ್ಯವಹಿಸುತ್ತಿರುವುದೇ ಇಂಥ ಘಟನೆಗೆ ಕಾರಣವಾಗಿದೆ ಎಂದು ಪಾಲಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಘಟನೆ ತಿಳಿದು ಸ್ಥಳಕ್ಕೆ ಕ್ಷೇತ್ರ ಶಿಕ್ಷಣಾಧಿಕಾರಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಆಹಾರದ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು.



# ಅಂಗನವಾಡಿ ಕಾರ್ಯಕರ್ತೆಯರ ಬೃಹತ್ ಪ್ರತಿಭಟನೆ

## ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಉಪತಹಶೀಲ್ದಾರ್‌ಗೆ ಮನವಿ




ಕೊಟ್ಟೂರು: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಫೆಡರೇಷನ್ (AITUC) ತಾಲೂಕು ಸಮಿತಿ ವತಿಯಿಂದ ಕೊಟ್ಟೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು. ನೂರಾರು ಅಂಗನವಾಡಿ ಕಾರ್ಯಕರ್ತೆಯರು ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ತೇರು ಬೀದಿಯಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ತಹಶೀಲ್ದಾರ್ ಕಚೇರಿವರೆಗೆ ಸಾಗಿತು. ಬಳಿಕ ಸರ್ಕಾರಕ್ಕೆ ಸಲ್ಲಿಸಬೇಕಿದ್ದ ಮನವಿ ಪತ್ರವನ್ನು ಉಪತಹಶೀಲ್ದಾರ್ ಪ್ರತಿಭಾ ಅವರಿಗೆ ಸಲ್ಲಿಸಲಾಯಿತು.

ಕಾರ್ಯಕರ್ತೆಯರಿಗೆ ರೂ.15 ಸಾವಿರ ಹಾಗೂ ಸಹಾಯಕಿಯರಿಗೆ ರೂ.10 ಸಾವಿರ ಗೌರವಧನ ನೀಡಬೇಕು. 2011ರಿಂದ ನಿವೃತ್ತರಾದ ಹಾಗೂ ಹಾಲಿ ಸೇವೆಯಲ್ಲಿರುವ ಸಿಬ್ಬಂದಿಗೆ ಗ್ರಾಚ್ಯುಟಿ ಸೌಲಭ್ಯ ಕಲ್ಪಿಸಬೇಕು. ಅಂಗನವಾಡಿ ನೌಕರರ ಮೇಲೆ ಹೆಚ್ಚುವರಿಯಾಗಿ ಹೇರಲಾಗುತ್ತಿರುವ BLO ಮತ್ತು SIR ಸಮೀಕ್ಷೆ ಕಾರ್ಯಗಳನ್ನು ಕೈಬಿಡಬೇಕು ಹಾಗೂ ಈ ಕಾರ್ಯ ನಿರಾಕರಿಸಿದವರ ಮೇಲಿನ ಅಮಾನತು ಕ್ರಮಗಳನ್ನು ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

SIR ಸಮೀಕ್ಷೆ ವೇಳೆ ಮೃತಪಟ್ಟ ಸಿಬ್ಬಂದಿಯ ಕುಟುಂಬಕ್ಕೆ ರೂ.30 ಲಕ್ಷ ಪರಿಹಾರ ನೀಡಬೇಕು. ಅನಾರೋಗ್ಯಕ್ಕೀಡಾದ ಸಿಬ್ಬಂದಿಗೆ ಉಚಿತ ವೈದ್ಯಕೀಯ ವೆಚ್ಚ ಭರಿಸಬೇಕು.

ಅಂಗನವಾಡಿ ಮಕ್ಕಳಿಗೆ ಪೌಷ್ಟಿಕ ಆಹಾರ ಹಾಗೂ ತರಕಾರಿ ಒದಗಿಸಲು ನೀಡುವ ಅನುದಾನವನ್ನು ಪ್ರಸ್ತುತ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಅಂಗನವಾಡಿ ನೌಕರರಿಗೆ ಕನಿಷ್ಠ ವೇತನ ಜಾರಿಗೊಳಿಸುವುದರ ಜೊತೆಗೆ ನಿವೃತ್ತರಾದವರಿಗೆ ಮಾಸಿಕ ಪಿಂಚಣಿ ಸೌಲಭ್ಯ ಕಲ್ಪಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ತಾಲೂಕು ಸಮಿತಿ ಪ್ರಧಾನ ಕಾರ್ಯದರ್ಶಿ ಎ. ದ್ರಾಕ್ಷಾಯಿಣಿ, ಅಧ್ಯಕ್ಷೆ ಎನ್. ರತ್ನಮ್ಮ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ಸಂತೋಷ ಸೇರಿದಂತೆ ಹಲವರು ಮಾತನಾಡಿದರು. ಮನವಿ ಸ್ವೀಕರಿಸಲು ತಹಶೀಲ್ದಾರ್ ಸ್ಥಳಕ್ಕೆ ಆಗಮಿಸದಿರುವುದಕ್ಕೆ ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು. ಉಪತಹಶೀಲ್ದಾರ್ ಪ್ರತಿಭಾ ಅವರು ಮನವಿ ಸ್ವೀಕರಿಸಿದರು.

# ಅಂತರರಾಜ್ಯ ಮನೆಗಳ್ಳ ಬಂಧನ: 23 ಲಕ್ಷ ಮೌಲ್ಯದ ಚಿನ್ನ–ನಗದು ಜಪ್ತಿ

ಬಳ್ಳಾರಿ: ಮನೆಗಳ್ಳತನ ಪ್ರಕರಣವೊಂದರ ತನಿಖೆ ನಡೆಸಿದ ಬಳ್ಳಾರಿಯ ಕೌಲಬಜಾರ್ ಪೊಲೀಸರು, ಅಂತರರಾಜ್ಯ ಮಟ್ಟದಲ್ಲಿ ಮನೆಗಳ್ಳತನ ನಡೆಸುತ್ತಿದ್ದ ಆರೋಪಿಯನ್ನು ಬಂಧಿಸಿ, ಸುಮಾರು 13 ಲಕ್ಷ ಮೌಲ್ಯದ 110 ಗ್ರಾಂ ಚಿನ್ನಾಭರಣ ಹಾಗೂ 10 ಲಕ್ಷ ನಗದು ಜಪ್ತಿ ಮಾಡಿದ್ದಾರೆ.


ಬಂಧಿತನನ್ನು ಹನುಮಂತಪ್ಪ (28) ಎಂದು ಗುರುತಿಸಲಾಗಿದೆ. ಬಳ್ಳಾರಿ ನಗರದ ಕರಿಮಾರೆಮ್ಮ ಕಾಲೋನಿಯಲ್ಲಿ ನಡೆದ ಮನೆಗಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಆರೋಪಿಯನ್ನು ಬಂಧಿಸಿದ್ದರು. ವಿಚಾರಣೆ ವೇಳೆ ಈತ ಹಲವು ಜಿಲ್ಲೆಗಳು ಹಾಗೂ ಆಂಧ್ರಪ್ರದೇಶದ ವಿವಿಧೆಡೆ ಮನೆಗಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿರುವುದು ಬೆಳಕಿಗೆ ಬಂದಿದೆ.

ಪೊಲೀಸರ ಪ್ರಕಾರ, ಹನುಮಂತಪ್ಪ ವಿರುದ್ಧ ಬಳ್ಳಾರಿಯ ಮೂರು ಪ್ರಕರಣಗಳು ಸೇರಿದಂತೆ ಒಟ್ಟು 40 ಮನೆಗಳ್ಳತನ ಪ್ರಕರಣಗಳು ದಾಖಲಾಗಿವೆ. ಬೆಂಗಳೂರು, ಗದಗ, ವಿಜಯನಗರ, ಚಿತ್ರದುಗ–ರ್, ದಾವಣಗೆರೆ, ಚಿಕ್ಕಬಳ್ಳಾಪುರ ಜಿಲ್ಲೆಗಳ ವಿವಿಧ ಪೊಲೀಸ್ ಠಾಣೆಗಳು ಹಾಗೂ ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಹಲವು ಠಾಣೆಗಳಲ್ಲಿ ಈತನ ವಿರುದ್ಧ ಪ್ರಕರಣಗಳಿರುವುದು ತನಿಖೆಯಿಂದ ತಿಳಿದುಬಂದಿದೆ.

ಆರೋಪಿಯ ಚಲನವಲನಗಳ ಮೇಲೆ ನಿರಂತರ ನಿಗಾ ಇರಿಸಿದ್ದ ಕೌಲಬಜಾರ್ ಪೊಲೀಸರು, ಆತ ಚಿನ್ನಾಭರಣ ಹಾಗೂ ಸುಮಾರು 10 ಲಕ್ಷ ನಗದು ತೆಗೆದುಕೊಂಡು ಬೆಂಗಳೂರಿನತ್ತ ತೆರಳುತ್ತಿದ್ದ ವೇಳೆ ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ.

ಬಂಧಿತನಿಂದ 110 ಗ್ರಾಂ ಚಿನ್ನಾಭರಣ ಹಾಗೂ 10 ಲಕ್ಷ ನಗದು ವಶಪಡಿಸಿಕೊಳ್ಳಲಾಗಿದೆ. ಪ್ರಕರಣದ ಮುಂದಿನ ತನಿಖೆ ಮುಂದುವರಿದಿದ್ದು, ಇನ್ನಷ್ಟು ಕಳ್ಳತನ ಪ್ರಕರಣಗಳು ಬೆಳಕಿಗೆ ಬರುವ ಸಾಧ್ಯತೆಯಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕೌಲಬಜಾರ್ ಪೊಲೀಸರ ಕಾರ್ಯಾಚರಣೆಗೆ ಹಿರಿಯ ಪೊಲೀಸ್ ಅಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಬಳ್ಳಾರಿಯಲ್ಲಿ ‘ಟಾಕ್ಸಿಕ್’ ಅಬ್ಬರ: ಯಶ್ ಅಭಿಮಾನಿಗಳ ಸಂಭ್ರಮ




ಬಳ್ಳಾರಿ, ಆ.26: ಬಹುನಿರೀಕ್ಷಿತ ಕನ್ನಡದ ಬಹುಭಾಷಾ ಸಿನಿಮಾ ‘ಟಾಕ್ಸಿಕ್’ ಇಂದು ರಾಜ್ಯಾದ್ಯಂತ ಭರ್ಜರಿಯಾಗಿ ತೆರೆಕಂಡಿದ್ದು, ಗಣಿ ಜಿಲ್ಲೆ ಬಳ್ಳಾರಿಯಲ್ಲೂ ಚಿತ್ರದ ಹವಾ ಜೋರಾಗಿದೆ. ಕನ್ನಡದ ಕುವರ, ನಟ ಯಶ್ ಅಭಿನಯದ ಚಿತ್ರವನ್ನು ಕಣ್ತುಂಬಿಕೊಳ್ಳಲು ಮುಂಜಾನೆಯಿಂದಲೇ ಅಭಿಮಾನಿಗಳು ಚಿತ್ರಮಂದಿರಗಳತ್ತ ದೌಡಾಯಿಸಿದ್ದು, ನಗರದಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಚಿತ್ರದ ಮೊದಲ ಪ್ರದರ್ಶನವೇ ಬೆಳಗ್ಗೆ 6 ಗಂಟೆ–ಗೆ ಆರಂಭವಾಗಿದ್ದು, ಶೋ ಆರಂಭಕ್ಕೂ ಮುನ್ನವೇ ಚಿತ್ರಮಂದಿರಗಳ ಎದುರು ಯಶ್ ಅಭಿಮಾನಿಗಳ ದಂಡೇ ನೆರೆದಿತ್ತು. ತಮ್ಮ ನೆಚ್ಚಿನ ನಟನ ಹೊಸ ಸಿನಿಮಾವನ್ನು ಮೊದಲ ದಿನವೇ, ಮೊದಲ ಶೋನಲ್ಲಿ ವೀಕ್ಷಿಸಬೇಕೆಂಬ ಉತ್ಸಾಹದಲ್ಲಿ ಅಭಿಮಾನಿಗಳು ಮುಂಜಾನೆಯಿಂದಲೇ ಚಿತ್ರಮಂದಿರಗಳ ಮುಂದೆ ಜಮಾಯಿಸಿದ್ದರು. ಸಿನಿಮಾ ಪ್ರದರ್ಶನ ಆರಂಭವಾಗುತ್ತಿದ್ದಂತೆ ಅಭಿಮಾನಿಗಳ ಸಂಭ್ರಮ ಮತ್ತಷ್ಟು ಹೆಚ್ಚಾಯಿತು. ಚಿತ್ರಮಂದಿರಗಳ ಮುಂಭಾಗದಲ್ಲಿ ಪಟಾಕಿ ಸಿಡಿಸಿ, ಘೋಷಣೆಗಳನ್ನು ಕೂಗಿ, ಕುಣಿದು ಕುಪ್ಪಳಿಸಿದ ಅಭಿಮಾನಿಗಳು ತಮ್ಮ ನೆಚ್ಚಿನ ನಟ ಯಶ್ಗೆ ಅದ್ದೂರಿ ಸ್ವಾಗತ ಕೋರಿದರು.

ಯಶ್ ಅವರ ಬೃಹತ್ ಕಟೌಟ್ಗಳನ್ನು ಚಿತ್ರಮಂದಿರಗಳ ಮುಂಭಾಗದಲ್ಲಿ ನಿರ್ಮಿಸಲಾಗಿದ್ದು, ಅವುಗಳಿಗೆ ಬೃಹತ್ ಹೂವಿನ ಹಾರಗಳನ್ನು ಹಾಕಿ ಅಭಿಮಾನಿಗಳು ಸಂಭ್ರಮಿಸಿದರು. ಕೆಲವೆಡೆ ಅಭಿಮಾನಿಗಳು ಕೇಕ್ ಕತ್ತರಿಸಿ, ಸಿಹಿ ಹಂಚಿ ಸಿನಿಮಾ ಬಿಡುಗಡೆಯನ್ನು ಹಬ್ಬದಂತೆ ಆಚರಿಸಿದರು.

ಬಳ್ಳಾರಿ ನಗರದಲ್ಲಿರುವ ನಾಲ್ಕು ಪ್ರಮುಖ ಚಿತ್ರಮಂದಿರಗಳು ಸೇರಿದಂತೆ ಜಿಲ್ಲೆಯಾದ್ಯಂತ ಸುಮಾರು 20 ಚಿತ್ರಮಂದಿರಗಳಲ್ಲಿ ‘ಟಾಕ್ಸಿಕ್’ ಸಿನಿಮಾ ತೆರೆಕಂಡಿದೆ. ನಗರದ ಚಿತ್ರಮಂದಿರಗಳಲ್ಲಿ ಬೆಳಗ್ಗೆ 6 ಗಂಟೆಯಿಂದಲೇ ಪ್ರದರ್ಶನ ಆರಂಭವಾಗಿದ್ದು, ಮೊದಲ ಶೋ ವೀಕ್ಷಿಸಲು ಅಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರು.

ಚಿತ್ರದ ಬಿಡುಗಡೆ ಹಿನ್ನೆಲೆಯಲ್ಲಿ ಚಿತ್ರಮಂದಿರಗಳ ಸುತ್ತಮುತ್ತ ಅಭಿಮಾನಿಗಳ ವಾಹನಗಳ ಸಂಖ್ಯೆ ಕೂಡ ಹೆಚ್ಚಾಗಿತ್ತು. ಬೆಳಗ್ಗೆಯೇ ಹೆಚ್ಚಿನ ಸಂಖ್ಯೆಯಲ್ಲಿ ಪ್ರೇಕ್ಷಕರು ಆಗಮಿಸಿದ್ದರಿಂದ ಚಿತ್ರಮಂದಿರಗಳ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಟುವಟಿಕೆ ಗರಿಗೆದರಿತ್ತು.

ಯಶ್ ಅಭಿನಯದ ಹಿಂದಿನ ಸಿನಿಮಾಗಳಿಗೂ ಬಳ್ಳಾರಿಯಲ್ಲಿ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಗಿತ್ತು. ಇದೀಗ ‘ಟಾಕ್ಸಿಕ್’ ಚಿತ್ರದ ಬಿಡುಗಡೆ ಮೂಲಕ ಮತ್ತೊಮ್ಮೆ ಯಶ್ ಅವರ ಮೇಲಿನ ಅಭಿಮಾನಿಗಳ ಕ್ರೇಜ್ ಬಹಿರಂಗವಾಗಿದೆ.

ವಿಶೇಷವಾಗಿ ಯುವಕರಲ್ಲಿ ಚಿತ್ರದ ಬಗ್ಗೆ ಹೆಚ್ಚಿನ ನಿರೀಕ್ಷೆ ಕಂಡುಬಂದಿದ್ದು, ಮೊದಲ ದಿನವೇ ಚಿತ್ರ ವೀಕ್ಷಿಸಲು ಅಭಿಮಾನಿಗಳು ಉತ್ಸಾಹದಿಂದ ಚಿತ್ರಮಂದಿರಗಳಿಗೆ ಆಗಮಿಸಿದ್ದಾರೆ. ಯಶ್ ಅವರ ಕಟೌಟ್ಗಳ ಮುಂದೆ ಸೆಲ್ಫಿ, ಫೋಟೋ ಹಾಗೂ ವಿಡಿಯೋಗಳನ್ನು ತೆಗೆದುಕೊಂಡು ಅಭಿಮಾನಿಗಳು ಸಂಭ್ರಮ ಹಂಚಿಕೊಂಡರು.

# ಬಳ್ಳಾರಿಯಲ್ಲಿ ರೈತ ಸಂತೆಗೆ ಚಾಲನೆ : ಮಧ್ಯವರ್ತಿಗಳ ಹಸ್ತಕ್ಷೇಪಕ್ಕೆ ಕಡಿವಾಣ



ಬಳ್ಳಾರಿ: ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಒದಗಿಸುವುದರ ಜತೆಗೆ ಗ್ರಾಹಕರಿಗೆ ತಾಜಾ, ಗುಣಮಟ್ಟದ ಹಾಗೂ ವಿಷಮುಕ್ತ ಆಹಾರ ಪದಾರ್ಥಗಳನ್ನು ನೇರವಾಗಿ ತಲುಪಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತು ‘ನಮ್ಮ ರೈತ ಉತ್ಪಾದಕರ ಸಂಸ್ಥೆ’ ಸಹಯೋಗದಲ್ಲಿ ನಗರದ ಗಾಂಧಿ ಭವನದಲ್ಲಿ ಬುಧವಾರ ರೈತ ಸಂತೆಗೆ ಚಾಲನೆ ನೀಡಲಾಯಿತು.

ಗಣ್ಯರು ಜ್ಯೋತಿ ಬೆಳಗಿಸಿ ಹಾಗೂ ಸಸಿಗೆ ನೀರುಣಿಸುವ ಮೂಲಕ ರೈತ ಸಂತೆಗೆ ಚಾಲನೆ ನೀಡಿದರು. ಪ್ರತಿ ಬುಧವಾರ ರೈತ ಸಂತೆ ನಡೆಸಲು ಉದ್ದೇಶಿಸಲಾಗಿದ್ದು, ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡಲು ವೇದಿಕೆ ಕಲ್ಪಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಬಳ್ಳಾರಿ ಮಹಾನಗರ ಪಾಲಿಕೆ ಮಹಾಪೌರ ಪಿ. ಗಾದೆಪ್ಪ, ರೈತರು ಮತ್ತು ಗ್ರಾಹಕರ ನಡುವೆ ನೇರ ಸಂಪರ್ಕ ಕಲ್ಪಿಸುವ ಇಂತಹ ಕಾರ್ಯಕ್ರಮ ಉತ್ತಮ ಹಾಗೂ ಅಗತ್ಯ ಪ್ರಯತ್ನವಾಗಿದೆ ಎಂದರು. ಆರಂಭದಲ್ಲಿ ಕೆಲವೊಂದು ಸಮಸ್ಯೆಗಳು ಎದುರಾದರೂ ರೈತ ಸಂತೆಯ ನಿರಂತರತೆಗೆ ಪಾಲಿಕೆ ಅಗತ್ಯ ಸಹಕಾರ ನೀಡಲಿದೆ. ಸೂಕ್ತ ಸ್ಥಳ ಗುರುತಿಸಿ ವ್ಯವಸ್ಥೆ ಕಲ್ಪಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿ–ದರು.

ಮುಂದಿನ ಪೀಳಿಗೆಗೆ ಆರೋಗ್ಯಕರ ಬದುಕು ಕಲ್ಪಿಸಲು ವಿಷಮುಕ್ತ ಹಾಗೂ ಗುಣಮಟ್ಟದ ಆಹಾರಕ್ಕೆ ಆದ್ಯತೆ ನೀಡಬೇಕು. ರೈತರು ನೈಸರ್ಗಿಕ ಕೃಷಿಯತ್ತ ಹೆಚ್ಚಿನ ಒಲವು ತೋರಿಸುವುದರ ಜತೆಗೆ, ಸಾರ್ವಜನಿಕರು ಸ್ಥಳೀಯ ರೈತರಿಂದ ನೇರವಾಗಿ ಉತ್ಪನ್ನಗಳನ್ನು ಖರೀದಿಸಿ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ರೈತರು ಉತ್ಪನ್ನಗಳನ್ನು ನೇರವಾಗಿ ಮಾರಾಟ ಮಾಡುವುದರಿಂದ ಮಧ್ಯವರ್ತಿಗಳ ಹಸ್ತಕ್ಷೇಪ ಕಡಿಮೆಯಾಗಿ ರೈತರಿಗೆ ಉತ್ತಮ ಬೆಲೆ ಹಾಗೂ ಗ್ರಾಹಕರಿಗೆ ಗುಣಮಟ್ಟದ ಉತ್ಪನ್ನಗಳು ದೊರೆಯಲಿವೆ. ‘ವಿಷಮುಕ್ತ ಭೂಮಿ, ವಿಷಮುಕ್ತ ಆಹಾರದಿಂದ ಆರೋಗ್ಯವಂತ ಭಾರತ ನಿರ್ಮಾಣ’ ಎಂಬ ಆಶಯದೊಂದಿಗೆ ರೈತ ಸಂತೆ ಮುಂದುವರಿಯಬೇಕು ಎಂದು ಅವರು ತಿಳಿಸಿದರು.

ಸರ್ಕಾರಿ ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ರೈತರೊಂದಿಗೆ ಸಂವಾದ ನಡೆಸಿದರು. ರೈತರು, ರೈತ ಮಹಿಳೆಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಬಸವರಾಜ ಸ್ವಾಮಿ, ಕಲ್ಯಾಣ ಸ್ವಾಮಿ, ಮಲ್ಲಿಕಾರ್ಜುನ್ ಬಳ್ಳಾರಿ, ಶಶಿಕಾಂತ್, ರವಿ ಎಸ್., ಮಹೇಶ್ವರ ಸ್ವಾಮಿ, ಹೊನ್ನೂರ್, ಪ್ರಕಾಶ್, ಚುಕ್ಕಿ ನಂಜುಂಡ ಸ್ವಾಮಿ, ಗಣಪಲ್ ಏನಾಥ್ ರೆಡ್ಡಿ, ಡಿ.ಆರ್. ನಾಗಭೂಷಣ್, ವಿಶ್ವೇಶ್ವರ ಸಜ್ಜನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೋಲ್ ಬಜಾರ್‌ನಲ್ಲಿ ಈದ್ ಮಿಲಾದ್ ಸಂಭ್ರಮ: ಮುಸ್ಲಿಂ ಬಾಂಧವರಿಂದ ಅದ್ದೂರಿ ಮೆರವಣಿಗೆ



ಬಳ್ಳಾರಿ: ನಗರದ ಗ್ರಾಮೀಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೋಲ್ ಬಜಾರ್ ಪ್ರದೇಶದಲ್ಲಿ ಈದ್ ಮಿಲಾದ್ ಹಬ್ಬವನ್ನು ಮುಸ್ಲಿಂ ಬಾಂಧವರು ಅತ್ಯಂತ ಸಡಗರ, ಸಂಭ್ರಮ ಹಾಗೂ ಭಕ್ತಿಭಾವದಿಂದ ಆಚರಿಸಿದರು. ಹಬ್ಬದ ಅಂಗವಾಗಿ ನಡೆದ ಅದ್ದೂರಿ ಮೆರವಣಿಗೆಯಲ್ಲಿ ಕೋಲ್ ಬಜಾರ್ ಸೇರಿದಂತೆ ನಗರದ ವಿವಿಧೆಡೆಗಳಿಂದ ಆಗಮಿಸಿದ್ದ ಸಾವಿರಾರು ಮಂದಿ ಪಾಲ್ಗೊಂಡು ಸಂಭ್ರಮಿಸಿದರು.

ಈದ್ ಮಿಲಾದ್ ಅಂಗವಾಗಿ ಬೆಳಗ್ಗೆಯಿಂದಲೇ ಕೋಲ್ ಬಜಾರ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಬ್ಬದ ವಾತಾವರಣ ಮನೆಮಾಡಿತ್ತು. ವಿವಿಧೆಡೆ ವಿಶೇಷ ಪ್ರಾರ್ಥನೆ, ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಸಾಮೂಹಿಕ ಆಚರಣೆಗಳು ನಡೆದವು. ಬಳಿಕ ಅಲಂಕೃತ ವಾಹನಗಳು ಹಾಗೂ ಧಾರ್ಮಿಕ ಸಂಕೇತಗಳೊಂದಿಗೆ ಭವ್ಯ ಮೆರವಣಿಗೆ ನಡೆಯಿತು.

ಮೆರವಣಿಗೆಯಲ್ಲಿ ಮಕ್ಕಳು, ಯುವಕರು, ಮಹಿಳೆಯರು ಹಾಗೂ ಹಿರಿಯರು ಸೇರಿದಂತೆ ಎಲ್ಲ ವಯೋಮಾನದವರು ಉತ್ಸಾಹದಿಂದ ಪಾಲ್ಗೊಂಡರು. ಪ್ರಮುಖ ರಸ್ತೆಗಳಲ್ಲಿ ಸಾಗಿದ ಮೆರವಣಿಗೆಯುದ್ದಕ್ಕೂ “ನಾರಾಯಲ್ ತಕ್ಬೀರ್, ಅಲ್ಲಾಹು ಅಕ್ಬರ್” ಎಂಬ ಘೋಷಣೆಗಳು ಮೊಳಗಿದವು. ಭಕ್ತಿಭಾವದಿಂದ ಘೋಷಣೆಗಳನ್ನು ಕೂಗುತ್ತಾ ಸಾಗಿದವರು ಪ್ರವಾದಿ ಹಜರತ್ ಮಹಮ್ಮದ್ ಪೈಗಂಬರ್ ಅವರ ಜೀವನ, ಬೋಧನೆ ಹಾಗೂ ಮಾನವೀಯ ಮೌಲ್ಯಗಳನ್ನು ಸ್ಮರಿಸಿದರು.

ಕೋಲ್ ಬಜಾರ್‌ನ ಪ್ರಮುಖ ರಸ್ತೆಗಳಲ್ಲಿ ಸಾಗಿದ ಮೆರವಣಿಗೆ ಸಾರ್ವಜನಿಕರ ಗಮನ ಸೆಳೆಯಿತು. ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ಹಿರಿಯರು ಮೆರವಣಿಗೆಗೆ ಸಾಥ್ ನೀಡಿದರು. ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದು, ಹಬ್ಬದ ಸಂಭ್ರಮಕ್ಕೆ ಮತ್ತಷ್ಟು ಮೆರುಗು ನೀಡಿತು. ಹಬ್ಬದ ಹಿನ್ನೆಲೆಯಲ್ಲಿ ಹಲವು ಪ್ರದೇಶಗಳಲ್ಲಿ ವಿಶೇಷ ಅಲಂಕಾರ ಮಾಡಲಾಗಿದ್ದು, ರಸ್ತೆಗಳು ಜನಸಂದಣಿಯಿಂದ ಕಳೆಗಟ್ಟಿದ್ದವು.

ಈದ್ ಮಿಲಾದ್ ಹಬ್ಬವು ಪ್ರವಾದಿ ಹಜರತ್ ಮಹಮ್ಮದ್ ಪೈಗಂಬರ್ ಅವರ ಜನ್ಮದಿನವನ್ನು ಸ್ಮರಿಸುವ ಮಹತ್ವದ ಧಾರ್ಮಿಕ ಆಚರಣೆಯಾಗಿದೆ. ಪ್ರವಾದಿಯವರು ಪ್ರತಿಪಾದಿಸಿದ ಪ್ರೀತಿ, ಕರುಣೆ, ಸಹನೆ, ಸತ್ಯ, ನ್ಯಾಯ, ಸಹೋದರತ್ವ ಹಾಗೂ ಮಾನವೀಯತೆಯ ಮೌಲ್ಯಗಳನ್ನು ಸ್ಮರಿಸುವ ದಿನವಾಗಿ ಈ ಹಬ್ಬವನ್ನು ಆಚರಿಸಲಾಗುತ್ತದೆ.

ಸಮಾಜದಲ್ಲಿ ಎಲ್ಲರೂ ಪರಸ್ಪರ ಗೌರವ, ಸಹಬಾಳ್ವೆ ಹಾಗೂ ಸೌಹಾರ್ದತೆಯಿಂದ ಬದುಕಬೇಕು ಎಂಬ ಸಂದೇಶವನ್ನು ಈ ಆಚರಣೆ ಸಾರುತ್ತದೆ. ಮೆರವಣಿಗೆಯಲ್ಲಿ ಭಾಗವಹಿಸಿದ್ದ ಸಮುದಾಯದ ಮುಖಂಡರು ಮಾತನಾಡಿ, ಈದ್ ಮಿಲಾದ್ ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗಿರದೆ, ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಸಹೋದರತ್ವವನ್ನು ಮತ್ತಷ್ಟು ಬಲಪಡಿಸುವ ಸಂದರ್ಭವಾಗಿದೆ ಎಂದರು. ಪ್ರವಾದಿ ಹಜರತ್ ಮಹಮ್ಮದ್ ಪೈಗಂಬರ್ ಅವರ ಮಾನವೀಯ ಬೋಧನೆಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಪ್ರೀತಿ, ಶಾಂತಿ ಹಾಗೂ ಪರಸ್ಪರ ಗೌರವದ ವಾತಾವರಣ ನಿರ್ಮಿಸಬೇಕು ಎಂದು ಕರೆ ನೀಡಿ–ದರು.

ಮೆರವಣಿಗೆಯ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಆಯೋಜ–ಕರು ಹಾಗೂ ಸ್ಥಳೀಯರು ಮುನ್ನೆಚ್ಚರಿಕೆ ವಹಿಸಿದ್ದರು. ಮೆರವಣಿಗೆ ಸಾಗುವ ಮಾರ್ಗದಲ್ಲಿ ಶಿಸ್ತು ಕಾಪಾಡುವ ಮೂಲಕ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಯಿತು.

ಒಟ್ಟಾರೆ ಕೋಲ್ ಬಜಾರ್‌ನಲ್ಲಿ ನಡೆದ ಈದ್ ಮಿಲಾದ್ ಆಚರಣೆ ಧಾರ್ಮಿಕ ಭಕ್ತಿ, ಸಂಭ್ರಮ ಹಾಗೂ ಸಾಮಾಜಿಕ ಸೌಹಾರ್ದತೆಯ ಪ್ರತೀಕವಾಗಿ ಗಮನ ಸೆಳೆಯಿತು. ಸಾವಿರಾರು ಮುಸ್ಲಿಂ ಬಾಂಧವರು ಒಂದಾಗಿ ಪಾಲ್ಗೊಂಡ ಅದ್ದೂರಿ ಮೆರವಣಿಗೆ ಕೋಲ್ ಬಜಾರ್ ಪ್ರದೇಶದ ಹಬ್ಬದ ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿತು.

# ವೀರಭದ್ರೇಶ್ವರ ಉತ್ಸವಮೂರ್ತಿ ಮೆರವಣಿಗೆ



ಕುರುಗೋಡು: ತಾಲೂಕಿನ ಎಚ್. ವೀರಾಪುರ ಗ್ರಾಮದಲ್ಲಿ ಶ್ರಾವಣ ಮಾಸದ ಎರಡನೇ ಸೋಮವಾರದ ಅಂಗವಾಗಿ ಶ್ರೀ ವೀರಭದ್ರೇಶ್ವರ ಸ್ವಾಮಿ ಉತ್ಸವಮೂರ್ತಿ ಮೆರವಣಿಗೆಯನ್ನು ಭಕ್ತಿಭಾವದಿಂದ ಅದ್ಧೂ–ರಿಯಾಗಿ ನಡೆಸಲಾಯಿತು.

ಗ್ರಾಮದ ಗಂಗಿ ಸ್ಥಳದಿಂದ ಆರಂಭಗೊಂಡ ಮೆರವಣಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಸಮಾವೇಶಗೊಂಡಿತು. ಮೆರವಣಿಗೆಯಲ್ಲಿ ವೀರಗಾಸೆ, ನಂದಿಧ್ವಜ, ಸಮಾಳ, ತಾಸಿರಾಮ್, ಸುಮಂಗಲೆಯರ ಪೂರ್ಣಕುಂಭ ಹಾಗೂ ಕಳಸ ಸೇರಿದಂತೆ ವಿವಿಧ ಕಲಾತಂಡಗಳು ಭಾಗವಹಿಸಿ ಮೆರವಣಿಗೆಗೆ ಮೆರುಗು ನೀಡಿದವು. ಭಕ್ತರು ವೀರಭದ್ರೇಶ್ವರ ಸ್ವಾಮಿಗೆ ಜೈಕಾರ ಕೂಗಿ ಭಕ್ತಿಸಮರ್ಪಣೆ ಮಾಡಿದರು.

ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅರ್ಲಾಪುರ ಡವಳೇಶ್ವರ ಮಠದ ರೇಣುಕಾ ಶಿವಾಚಾರ್ಯ ಶಿವಯೋಗಿ ಶ್ರೀಗಳು, ಆಧುನಿಕ ಜೀವನಶೈಲಿಯ ಪ್ರಭಾವದಿಂದ ಜನರು ಶ್ರಾವಣ ಮಾಸದ ಪವಿತ್ರ ಧಾರ್ಮಿಕ ಆಚರಣೆಗಳ ಬಗ್ಗೆ ಅಸಡ್ಡೆ ತೋರುತ್ತಿರುವುದು ವಿಷಾದನೀಯ ಎಂದರು.

ನಮ್ಮ ಧಾರ್ಮಿಕ ಆಚರಣೆಗಳು ಹಾಗೂ ಸಂಪ್ರದಾಯಗಳು ನಾಡಿನ ಸಂಸ್ಕೃತಿಯ ಪ್ರತೀಕವಾಗಿದ್ದು, ಅವುಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಿ ಉಳಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಧಾರ್ಮಿಕ ಆಚರಣೆಗಳ ಮೂಲಕ ಸಮಾಜದಲ್ಲಿ ಭಕ್ತಿ, ಶಾಂತಿ ಹಾಗೂ ಸೌಹಾರ್ದತೆ ಬೆಳೆಸಬೇಕು ಎಂದು ಅವರು ಹೇಳಿದರು. ಗ್ರಾಮದ ಭಕ್ತರು, ಮಹಿಳೆಯರು ಹಾಗೂ ವಿವಿಧ ಕಲಾತಂಡಗಳ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉತ್ಸವವನ್ನು ಯಶಸ್ವಿಗೊಳಿಸಿದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.